ಸಂಪುಟ : 9 ಸಂಚಿಕೆ 108 ಪುಟ : 4 ಬೆಲೆ: 3.00 ಶುಕ್ರವಾರ ಮೇ 31 2024 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ

Volume : 9 Issue : 108 Pages : 4 Price : 3.00 Friday May 31 2024 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

ಲೋಕಸಭೆ ಸಾರ್ವತ್ರಿಕ ಚುನಾವಣೆ ಮತ ಎಣಿಕೆ

ಜಿಲ್ಲೆಯಾದ್ಯಂತ ಪ್ರತಿಬಂಧಕಾಜ್ಞೆ ಜಾರಿ

■ ವಿಜಯಸಾಕ್ಷಿ ಸುದ್ದಿ, ಗದಗ

ಜೂನ್ 4ರಂದು ಮತ ಎಣಿಕೆ ಕಾರ್ಯವು ಮುಕ್ತವಾಗಿ ಮತ್ತು ಶಾಂತಿಯುತವಾಗಿ ಜರುಗುವ ಹಿನ್ನಲೆಯಲ್ಲಿ ಶಾಂತಿ, ಸುವ್ಯವಸ್ಥೆ ಕಾಪಾಡುವ ಹಿತದೃಷ್ಟಿಯಿಂದ ಜೂನ್ 3, 2024ರ ಸಾಯಂಕಾಲ 6 ಗಂಟೆಯಿಂದ ಜೂನ್ 5, 2024 ರ ಬೆಳಿಗ್ಗೆ 6 ಗಂಟೆಯವರೆಗೆ ಗದಗ ಜಿಲ್ಲೆಯಾದ್ಯಂತ ಪ್ರತಿಬಂಧಕಾಜ್ಞೆ ಜಾರಿಗೊಳಿಸಿ ಜಿಲ್ಲಾಧಿಕಾರಿ ವೈಶಾಲಿ ಎಂ ಎಲ್ ಆದೇಶ ಹೊರಡಿಸಿದ್ದಾರೆ.

ಜಿಲ್ಲೆಯಾದ್ಯಂತ ಗೆದ್ದ ರಾಜಕೀಯ ಪಕ್ಷಗಳ ಅಭ್ಯರ್ಥಿಗಳ ಪರ ಕಾರ್ಯಕರ್ತರು, ಬೆಂಬಲಿಗರು ವಿಜಯೋತ್ಸವ, ಮೆರವಣಿಗೆ ಮಾಡುವುದರಿಂದ ಸೋತ ಅಭ್ಯರ್ಥಿಗಳಿಗೆ ಹಾಗೂ ಅವರ ಪಕ್ಷಗಳ ಮುಖಂಡರಿಗೆ, ಕಾರ್ಯಕರ್ತರಿಗೆ ವಿವಿಧ ರೀತಿಯ ಮನಸ್ಥಾಪಗಳು ಉಂಟಾಗಿ ಈ ಸಮಯದಲ್ಲಿ ಪರಾಭವಗೊಂಡ ಅಭ್ಯರ್ಥಿಗಳು ಮತ್ತು ವಿಜೇತರಾದ ಅಭ್ಯರ್ಥಿ ಹಾಗೂ ಬೆಂಬಲಿಗರ ನಡುವೆ ಸಂಘರ್ಷ ಉಂಟಾಗುವ ಸಾಧ್ಯತೆಗಳು ಹೆಚ್ಚಾಗಿರುವುದರಿಂದ ಶಾಂತಿ ಪಾಲನೆ ಹಾಗೂ ಕಾನೂನು ಸುವ್ಯವಸ್ಥೆ ಕಾಪಾಡುವ ದೃಷ್ಟಿಯಿಂದ ಗದಗ ಜಿಲ್ಲೆಯಾದ್ಯಂತ ನಿಷೇಧಾಜ್ಞೆ ಘೋಷಿಸುವುದು ಅವಶ್ಯಕವಾಗಿದೆ ಎಂದು ಆದೇಶದಲ್ಲಿ ಉಲ್ಲೇಖಿಸಿದ್ದಾರೆ.

ಈ ಅವಧಿಯಲ್ಲಿ 5ಕ್ಕಿಂತ ಹೆಚ್ಚು ಜನರು ಗುಂಪು ಕೂಡಿ ಓಡಾಡುವುದನ್ನು ನಿಷೇಧಿಸಿದೆ. ದೇಹಕ್ಕೆ ಅಪಾಯ ಉಂಟು ಮಾಡಬಹುದಾದ ಯಾವುದೇ ಮಾರಕಾಸ್ತ್ರವನ್ನು ತೆಗೆದುಕೊಂಡು ಹೋಗುವುದನ್ನು ಮತ್ತು ತಿರುಗಾಡುವುದನ್ನು ಪ್ರತಿಬಂಧಿಸಲಾಗಿದೆ.

ಈ ಅವಧಿಯಲ್ಲಿ ಯಾವುದೇ ಸಭೆ ಸಮಾರಂಭ ಅಥವಾ ಮೆರವಣಿಗೆಗಳನ್ನು ನಡೆಸುವುದನ್ನು ನಿಷೇಧಿಸಿದೆ. ಸಾರ್ವಜನಿಕವಾಗಿ ಯಾವುದೇ ವ್ಯಕ್ತಿಗಳ ಬಗ್ಗೆ ಪ್ರಚೋದನಾತ್ಮಕವಾಗಿ ತೇಜೋವಧೆ ಮಾಡುವಂತಹ ಸಾರ್ವಜನಿಕರ ಗಾಂಭೀರ್ಯ ಹಾಗೂ ನೈತಿಕತೆಗೆ ಭಂಗ ತರುವಂತಹ ಅಥವಾ ಕಾನೂನು ಮತ್ತು ಸುವ್ಯವಸ್ಥೆಗೆ ಭಂಗ ತರುವಂತಹ ಯಾವುದೇ ಕೃತ್ಯಗಳಲ್ಲಿ ತೊಡಗುವುದನ್ನು ನಿಷೇಧಿಸಲಾಗಿದೆ. ಈ ಆದೇಶವು ಶವ ಸಂಸ್ಕಾರ ಮದುವೆ ಹಾಗೂ ಧಾರ್ಮಿಕ ಸಭೆ ಸಮಾರಂಭಗಳಿಗೆ ಅನ್ವಯಿಸುವುದಿಲ್ಲ. ಪೊಲೀಸ್ ಅಧೀಕ್ಷಕರು ಈ ಆದೇಶವನ್ನು ಕಟ್ಟುನಿಟ್ಟಾಗಿ ಜಾರಿಯಲ್ಲಿ ತರಬೇಕು. ಆರಕ್ಷಕ ಅಧೀಕ್ಷಕರು, ಗದಗ ಇವರು ಈ ಆದೇಶವನ್ನು ಪರಿಣಾಮಕಾರಿಯಾಗಿ ಜಾರಿಗೆ ಬರುವಂತೆ ಕ್ರಮ ಕೈಗೊಳ್ಳಬೇಕೆಂದು ಪ್ರತಿಬಂಧಕಾಜ್ಞೆ ಆದೇಶದಲ್ಲಿ ಜಿಲ್ಲಾಧಿಕಾರಿಗಳು ತಿಳಿಸಿದ್ದಾರೆ.

ಇಂದಿನ ನೀರು ಪೂರೈಕೆ ವಿವರ

■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ–ಬೆಟಗೇರಿ ಅವಳಿ ನಗರದಲ್ಲಿ ಮೇ 31ರಂದು ಈ ಕೆಳಗಿನ ಸ್ಥಳಗಳಿಗೆ ನೀರು ಪೂರೈಕೆ ಮಾಡಲಾಗುವುದು ಎಂದು ನಗರಸಭೆ ಅಧಿಕಾರಿಗಳು ತಿಳಿಸಿದ್ದಾರೆ.

ಸ್ಥಳಗಳ ವಿವರ: ವಾರ್ಡ್ ನಂ. 29ರಲ್ಲಿ ಹೊಸ ಹುಡ್ಕೋ ರಾಜೀವಗಾಂಧಿ ನಗರ, ವಾರ್ಡ್ ನಂ. 2ರಲ್ಲಿ ಸೆಟ್ಲಮೆಂಟ್, ಗಾಂಧಿನಗರ, ಸ್ಲಾಬ್‌ಮನೆ, ವೆಲ್‌ಫೇರ್, ಹನಮಂತ ದೇವರಗುಡಿ, ಹರಣ ಶಿಕಾರಿ ಓಣಿ, ಸಬ್ ಜೈಲ್ ರಸ್ತೆ, ಕೆಲವು ಉಳಿದ ಭಾಗಗಳು.

ವಾರ್ಡ್ ನಂ. 8,9,10 ಹೆಲ್ತ್ ಕ್ಯಾಂಪ್ ಕೆಲವು ಭಾಗಗಳು, ಸಿ.ಎಸ್.ಪಾಟೀಲ, ನಾಗರಕಟ್ಟಿ ಲೈನ್, ದೇವಗಿರಿ ಶಾಲೆ ಲೈನ್, ಸಂತೋಷ ಕಿರಾಣಿ ಲೈನ್, ಕಟ್ಟಿ ಟೀಚರ್ ಲೈನ್, ಎಸ್.ಎಸ್.ಪಾಟೀಲ, ಕಾಗದಗಾರ, ಕೊರ್ಲಳ್ಳಿ ಮಾಸ್ತರ್ ಲೈನ್, ಅಬ್ಬಿಗೇರಿ ಕಾಂಪೌಂಡ್, ಗವಾಯಿಗಳ ಆಶ್ರಮ, ಕೃಷ್ಣ ಟ್ಯೂಷನ್ ಲೈನ್, ಸೊಲ್ಲಾಪಟ್ಟಿ ಲೈನ್, ಮಲ್ಲಾಡದ ಅವರ ಲೈನಗಳು,

ವಾರ್ಡ್ ನಂ. 35ರಲ್ಲಿ ನೀಲಮ್ಮತಾಯಿ ಮಠ, ಅಕ್ಕಿ ಡಾ ಲೈನ್, ಆದರ್ಶನಗರ, ಗಡಗಿಯವರ ಲೈನ್, ವಾರ್ಡ್ ನಂ. 34ರಲ್ಲಿ ಕಡದಳ್ಳಿಮಠ, ಸೇವಾಲಾಲ್ ನಗರ, ಗರಗದವರ ಲೈನ್, ಅಬ್ಬಿಗೇರಿ ಲೇಔಟ್, ಲಯನ್ಸ್ ಶಾಲೆ, ಸರ್ವೋದಯ ಶಾಲೆ, ಕೆಲವು ಉಳಿದ ಭಾಗಗಳು.

ತುಂಗಭದ್ರಾ ನದಿಯಿಂದ ಪೂರೈಕೆ ಮಾಡಿದ ನೀರನ್ನು ಸಂಗ್ರಹಣೆ ಮಾಡಿದ ನಂತರ ಕಡ್ಡಾಯವಾಗಿ ಕಾಯಿಸಿ ಆರಿಸಿ ಕುಡಿಯಲು ಉಪಯೋಗಿಸತಕ್ಕದ್ದು ಎಂದು ನಗರಸಭೆ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ವಾಲ್ಮೀಕಿ ನಿಗಮದ ಹಣ ಚುನಾವಣೆ ಫಂಡಿಂಗ್‌ಗೆ ಬಳಕೆ: ಬಸವರಾಜ ಬೊಮ್ಮಾಯಿ ಆರೋಪ

ಇಡೀ ಸಂಪುಟವೇ ಭ್ರಷ್ಟಾಚಾರದಲ್ಲಿ ಮುಳುಗಿದೆ

■ ವಿಜಯಸಾಕ್ಷಿ ಸುದ್ದಿ, ಗದಗ

ಭ್ರಷ್ಟಾಚಾರವನ್ನು ಪ್ರೋತ್ಸಾಹಿಸುವ, ಭ್ರಷ್ಟಾರದಲ್ಲಿ ಮುಳುಗಿರುವ ಸರ್ಕಾರ ರಾಜ್ಯದಲ್ಲಿ ಆಡಳಿತದಲ್ಲಿದೆ. ಇಡೀ ಕ್ಯಾಬಿನೆಟ್ ಭ್ರಷ್ಟಾಚಾರದಲ್ಲಿ ಮುಳುಗಿರುವುದರಿಂದ ಸಚಿವರ ರಾಜೀನಾಮೆ ಕೇಳುವ ನೈತಿಕತೆಯನ್ನು ಸಿಎಂ ಕಳೆದುಕೊಂಡಿದ್ದಾರೆ ಎಂದು ಮಾಜಿ ಮುಖ್ಯಮಂತ್ರಿ ಬಸವರಾಜ್ ಬೊಮ್ಮಾಯಿ ಆರೋಪಿಸಿದರು.

ಗುರುವಾರ ನಗರದಲ್ಲಿ ಪತ್ರಿಕಾಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಅವರು, ಎಸ್‌ಸಿ/ಎಸ್‌ಟಿ ಸಮುದಾಯವನ್ನು ಉದ್ಧರಿಸುತ್ತೇವೆ ಎಂದು ಕಾಂಗ್ರೆಸ್ ಹೇಳಿಕೊಳ್ಳುತ್ತಿದೆ. ವಾಲ್ಮೀಕಿ ನಿಗಮದಲ್ಲಿ ಕೊಟ್ಟ ಹಣ ಎಸ್‌ಟಿ ಜನಾಂಗಕ್ಕೆ ಉಪಯೋಗವಾಗಬೇಕಿತ್ತು. ಆ ಹಣವನ್ನ ಲೂಟಿ ಮಾಡಿದ್ದಾರೆ. 14 ಅಕೌಂಟ್‌ಗಳ ಮೂಲಕ ಬೇರೆ ಬೇರೆ ಕಡೆ ಹಣ ಹೋಗಿದೆ. 94 ಕೋಟಿ ರೂಪಾಯಿ ಹಿರಿಯ ಅಧಿಕಾರಿಗಳ ಆಶೀರ್ವಾದ ಇಲ್ಲದೆ ದೋಚಲು ಸಾಧ್ಯವಿಲ್ಲ. ಈಗಾಗಲೇ ಮಂತ್ರಿಗಳು ರಾಜೀನಾಮೆ ಕೊಡಬೇಕಿತ್ತು. ಈಶ್ವರಪ್ಪ ಅವರ ವಿಷಯ ಬಂದಾಗ, ಡಿಸಿಎಂ

ಡಿ.ಕೆ. ಶಿವಕುಮಾರ್ ಅರಚಾಡಿದ್ದೇ ಬಂತು. ಈಗ ನಿಮ್ಮ ನೈತಿಕತೆ ಎಲ್ಲಿದೆ ಎಂದು ಪ್ರಶ್ನಿಸಿದರು.

ಈ ಪ್ರಕರಣದಲ್ಲಿ ಬೇರೆ ಬೇರೆ ರಾಜ್ಯಗಳ ಪಾತ್ರವೂ ಇದ್ದು, 14 ಅಕೌಂಟ್ ಹಿಡಿದು ವಿಚಾರಿಸಿದರೆ ಎಲ್ಲ ಸತ್ಯ ಹೊರಬೀಳುತ್ತದೆ. ಮುಕ್ತವಾದ ತನಿಖೆಯಾಗಬೇಕಾದಲ್ಲಿ ಸಿಬಿಐಗೆ ಕೊಡಲಿ. ಈಶ್ವರಪ್ಪ ಪ್ರಕರಣ, ಸದರಿ ಪ್ರಕರಣ ಬೇರೆಯೇ ಎಂದು ಗೃಹ ಸಚಿವರು ಹೇಳುತ್ತಾರೆ. ಈಶ್ವರಪ್ಪ ಅವರ ಪ್ರಕರಣಕ್ಕಿಂತಲೂ ಇದು ಗಂಭೀರವಾಗಿದೆ ಎಂದು ಬೊಮ್ಮಾಯಿ ಆರೋಪಿಸಿದರು.

ಯಾವ ಅಭಿವೃದ್ಧಿ ನಿಗಮದಲ್ಲಿ ಅವ್ಯವಹಾರವಾಗಿತ್ತೋ ಆ ಅಕೌಂಟೆಂಟ್ ಆತ್ಮಹತ್ಯೆ ಮಾಡಿಕೊಂಡಿದ್ದಾರೆ. ಆ ಘಟನೆ ನಡೆದಿಲ್ಲವಾಗಿದ್ದರೆ ಕೇಸ್ ಹೊರ ಬರುತ್ತಿರಲಿಲ್ಲ. ಎಸ್ಸಿ/ಎಸ್ಟಿ ಮೀಸಲಾತಿ ಹೆಚ್ಚಳದಲ್ಲೂ ಕಾಂಗ್ರೆಸ್ ಯಾವುದೇ ದಿಟ್ಟ ಕ್ರಮ ತೆಗೆದುಕೊಂಡಿಲ್ಲ. ನಾನು ಮುಖ್ಯಮಂತ್ರಿ ಇದ್ದಾಗ ಆ ಕ್ರಮ ತೆಗೆದುಕೊಂಡಿದ್ದೆ. ಎಸ್‌ಟಿಪಿ, ಟಿಎಸ್‌ಪಿ ಅಡಿ ಪರಿಶಿಷ್ಟರಿಗೆ ಇಟ್ಟ ಹಣವನ್ನ ಗ್ಯಾರಂಟಿಗೆ ತಿರುಗಿಸಲಾಗಿದೆ ಎಂದು ಆರೋಪಿಸಿದರು.

ಮಹಾತ್ಮ ಗಾಂಧೀಜಿ ವಿಷಯವಾಗಿ ಪ್ರಧಾನಿ ನರೇಂದ್ರ ಮೋದಿ ನೀಡಿರುವ ಹೇಳಿಕೆಯ ಕುರಿತು ಕೇಳಿದ ಪ್ರಶ್ನೆಗೆ ಪ್ರತಿಕ್ರಿಯಿಸಿದ ಅವರು, ಪ್ರಧಾನಿ ಅವರು ಯಾವ ದೃಷ್ಟಿಕೋನದಲ್ಲಿ ಹೇಳಿದ್ದಾರೆ ಅರ್ಥ ಮಾಡಿಕೊಳ್ಳಬೇಕು. ಮೋದಿ ಅವರು

> ರಾಜ್ಯ ಸರ್ಕಾರ ಈ ಹಗರಣವನ್ನು ಸಿಐಡಿ ತನಿಖೆಗೆ ವಹಿಸಿದ್ದಾರೆ. ಯಾವ ಹಾಲಿ ಸಚಿವರ ವಿರುದ್ಧ ಸಿಐಡಿ ತನಿಖೆ ಮಾಡಲು ಸಾಧ್ಯ? ಇದರಿಂದ ಮುಕ್ತ ತನಿಖೆ ನಡೆಯದು. ಹಣ ವಾಪಾಸ್ ಬರುವುದೂ ಇಲ್ಲ. ಪ್ರಕರಣದ ತನಿಖೆಯನ್ನು ಸಿಬಿಐಗೆ ವಹಿಸಬೇಕು. ರಾಷ್ಟ್ರೀಕೃತ ಬ್ಯಾಂಕಿನಲ್ಲಿ 10 ಕೋಟಿಗಿಂತ ಹೆಚ್ಚು ಹಣ ಅವ್ಯವಹಾರವಾಗಿದ್ದರೆ ಸಿಬಿಐಗೆ ವಹಿಸಬೇಕೆಂಬ ನಿಯಮವಿದೆ ಎಂದು ಬಸವರಾಜ ಬೊಮ್ಮಾಯಿ ಆಗ್ರಹಿಸಿದರು.

ಗುಜರಾತ್‌ನವರು. ಅವರಿಗೆ ಗಾಂಧೀಜಿ ಬಗ್ಗೆ ಗೊತ್ತಿಲ್ಲವೆಂದಲ್ಲ. ಅವರು ಹೇಳುವ ತಾತ್ಪರ್ಯ, ಸ್ವಾತಂತ್ರ್ಯ ಹೋರಾಟದಲ್ಲಿ ಪ್ರಮುಖ ಪಾತ್ರ ವಹಿಸಿದ ಗಾಂಧೀಜಿಯವರನ್ನು ಪರದೆ ಹಿಂದೆ ಇಟ್ಟಿದ್ದರು. ಈಗ ಗಾಂಧಿ ಕುಟುಂಬ ಮುಂದೆ ಬಂದಿದೆ. ಸ್ವಾತಂತ್ರ್ಯಾನಂತರ ಎಲ್ಲಿಯೇ ಹೋದರೂ ನೆಹರು ಹೆಸರು ಬರುತ್ತಿತ್ತು. ಮಹಾತ್ಮಾ ಗಾಂಧಿ ಹಿಂದೆ ಸರಿದರು ಎನ್ನುವ ದೃಷ್ಟಿಕೋನದಲ್ಲಿ ಹೇಳಿದ್ದಾರೆ ಎಂದು ತಿಳಿಸಿದರು.

'ವಿಶ್ವ ಸ್ಕಿಝೋಫ್ರೀನಿಯಾ ದಿನಾಚರಣೆ' ಕಾರ್ಯಕ್ರಮದಲ್ಲಿ ನ್ಯಾ.ಮೂ ಶಿವನಗೌಡ್ರ

ಮಾನಸಿಕ ಆರೋಗ್ಯ ಕಾಯ್ದುಕೊಳ್ಳಿ

■ ವಿಜಯಸಾಕ್ಷಿ ಸುದ್ದಿ, ಗದಗ

ಪ್ರತಿಯೊಬ್ಬರಿಗೂ ಮಾನಸಿಕ ಆರೋಗ್ಯ ಅತ್ಯವಶ್ಯವಾಗಿದ್ದು, ವಿದ್ಯಾರ್ಥಿಗಳು ವಿದ್ಯಾಭ್ಯಾಸದ ಜೊತೆಗೆ ಮಾನಸಿಕ ಆರೋಗ್ಯ ಕಾಯ್ದುಕೊಳ್ಳಬೇಕು ಎಂದು ಹಿರಿಯ ದಿವಾಣಿ ನ್ಯಾಯಾಧಿಶರಾದ ಸಿ.ಎಸ್. ಶಿವನಗೌಡ್ರ ಹೇಳಿದರು.

ನಗರದ ತೊಂಟದಾರ್ಯ ತಾಂತ್ರಿಕ ಮಹಾವಿದ್ಯಾಲಯಲ್ಲಿ ಗುರುವಾರ ಜಿಲ್ಲಾ ಆಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ಮಾನಸಿಕ ಆರೋಗ್ಯ ಕಾರ್ಯಾಕ್ರಮ ವಿಭಾಗ, ಗದಗ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯ ಮಾನಸಿಕ ಆರೋಗ್ಯ ವಿಭಾಗ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ತಾಲೂಕಾ ಆರೋಗ್ಯ ಇಲಾಖೆ ಹಾಗೂ ತೊಂಟದಾರ್ಯ ತಾಂತ್ರಿಕ ಮಹಾವಿದ್ಯಾಲಯ ಇವರುಗಳ ಸಂಯುಕ್ತ ಆಶ್ರಯದಲ್ಲಿ ಜರುಗಿದ 'ವಿಶ್ವ ಸ್ಕಿಝೋಫ್ರೀನಿಯಾ ದಿನಾಚರಣೆ' ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಮಾನಸಿಕ ಖಾಯಿಲೆಗಳಿಗೆ ಚಿಕಿತ್ಸೆ ಪಡೆಯಲು

ಜಾಗೃತಿ ಮೂಡಿಸುವದು ನಮ್ಮ ನಿಮ್ಮೆಲ್ಲರ ಕರ್ತವ್ಯವಾಗಿದೆ ಹಾಗೂ ಸಮಾಜವು ಮಾನಸಿಕ ಖಾಯಿಲೆ ಇದ್ದ ವ್ಯಕ್ತಿಗೆ ಕಾಳಜಿ ವಹಿಸಿ ಚಿಕಿತ್ಸೆ ಕೊಡಿಸಲು ಮುಂದಾಗಬೇಕೆಂದು ಕರೆ ನೀಡಿದರು.

ತೊಂಟದಾರ್ಯ ತಾಂತ್ರಿಕ ಮಹಾವಿದ್ಯಾಲಯ ಪ್ರಾಂಶುಪಾಲ ಮಹೇಶ ಅವಟಿ ಮಾತನಾಡಿ, ಉಪಯುಕ್ತವಾದ ಕಾರ್ಯಕ್ರಮವನ್ನು ಹಮ್ಮಿಕೊಂಡಿದ್ದಕ್ಕೆ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಗೆ ಧನ್ಯವಾದವನ್ನು ತಿಳಿಸಿದರು ಹಾಗೂ ವಿದ್ಯಾರ್ಥಿಗಳಿಗೆ ಸ್ಕಿಝೋಫ್ರೀನಿಯಾ ಖಾಯಿಲೆ ಮತ್ತು ಚಿಕಿತ್ಸೆ ಕುರಿತು ಸಮಾಜದಲ್ಲಿ ಅರಿವು ಮೂಡಿಸಬೇಕೆಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ. ಎಸ್.ಎಸ್. ನೀಲಗುಂದ, ಜಿಲ್ಲಾ ಸಮೀಕ್ಷಣಾಧಿಕಾರಿ ಡಾ.

> ಗದಗ ವೈದ್ಯಕೀಯ ವಿಜ್ಞಾನ ಸಂಸ್ಥೆಯ ಮಾನಸಿಕ ಆರೋಗ್ಯ ವಿಭಾಗ ಮುಖ್ಯಸ್ಥರಾದ ಡಾ. ಸೊಮಶೇಖರ ಬಿಜ್ಜಳ ಮಾತನಾಡಿ, ಮಾನಸಿಕ ಅಸ್ವಸ್ಥರಿಗೆ ಸಮಾಜದ ಕಾಳಜಿ ಅತ್ಯವಶ್ಯವಾಗಿದೆ. ಭಾರತ ಸರ್ಕಾರವು ಪ್ರಾರಂಭಿಸಿರುವ ಟೆಲಿ–ಮನಸ್ ಉಚಿತ ಸಹಾಯವಾಣಿ ಸಂಖ್ಯೆ 14416ಗೆ ಕರೆ ಮಾಡಿ ಆಪ್ತ ಸಮಾಲೋಚನೆ ಸೇವೆ ಪಡೆಯಬಹುದು ಎಂದು ತಿಳಿಸಿದರಲ್ಲದೆ, ಪರೀಕ್ಷಾ ತಯಾರಿ ಮತ್ತು ಕೌಶಲ್ಯಗಳ ಕುರಿತು ವಿದ್ಯಾರ್ಥಿಗಳಿಗೆ ಮಾಹಿತಿ ನೀಡಿದರು.

ವೆಂಕಟೇಶ ರಾಠೋಡ, ಜಿಲ್ಲಾ ಮಾನಸಿಕ ಆರೋಗ್ಯ ಕಾರ್ಯಕ್ರಮ ಅನುಷ್ಠಾನ ಅಧಿಕಾರಿಗಳಾದ ಡಾ. ಆರ್.ಸಿ. ಬಸರಿಗಿಡದ ಸೇರಿದಂತೆ ಸಿಬ್ಬಂದಿ ಮತ್ತು ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

ನಿಧಿ ಮುದಿಗೌಡ್ರ ಸ್ವಾಗತಿಸಿದರು. ಬಿ.ಮಾನ್ಯ ಶೆಟ್ಟಿ ಕಾರ್ಯಕ್ರಮ ನಿರೂಪಿಸಿದರು. ಸಂಚನಾ ಪತ್ತಾರ ವಂದಸಿದರು.

ರಿಯಾಯಿತಿ ದರದ ಬೀಜ ಮಾರಾಟ ಪ್ರಾರಂಭ

■ ವಿಜಯಸಾಕ್ಷಿ ಸುದ್ದಿ, ಗದಗ

ಮುಂಗಾರು ಹಂಗಾಮಿನ ರಿಯಾಯಿತಿ ದರದ ಬಿತ್ತನೆ ಬೀಜ ಮಾರಾಟವನ್ನು ಗದಗ–ಬೆಟಗೇರಿ ಹೋಬಳಿ ಕೃಷಿ ಕೇಂದ್ರದ ಕೃಷಿ ಅಧಿಕಾರಿ ವೀರಣ್ಣ ಗಡಾದ ಹೆಸರು ಹಾಗೂ ತೊಗರಿ ಬೀಜಗಳನ್ನು ರೈತರಿಗೆ ವಿತರಿಸುವ ಮೂಲಕ ಚಾಲನೆ ನೀಡಿದರು.

ಈ ಸಂದರ್ಭದಲ್ಲಿ ಮಾತನಾಡಿದ ಅವರು, ಮುಂಗಾರು ಹಂಗಾಮು ಜೂನ್ 6ರಿಂದ ಪ್ರಾರಂಭವಾಗುತ್ತಿದ್ದು, ರೈತರು ಭೂಮಿ ಸಂಪೂರ್ಣವಾಗಿ ತೇವಾಂಶ ಬಂದ ನಂತರ ಬಿತ್ತನೆ ಕಾರ್ಯ ಕೈಗೊಳ್ಳುವುದರಿಂದ ಹೆಚ್ಚಿನ ಇಳುವರಿ ಪಡೆಯಬಹುದು ಎಂದು ಹೇಳಿದರು.

ಈ ಸಂದರ್ಭದಲ್ಲಿ ಸಂಜೀವ ರೆಡ್ಡಿ, ಮಲ್ಲಪ್ಪ ಹಾಗೂ ತಾಲೂಕಿನ ಅನೇಕ ರೈತರು ಪಾಲ್ಗೊಂಡಿದ್ದರು.

ಪೊಲೀಸ್ ಸಿಬ್ಬಂದಿಗಳ ಒಂದು ದಿನದ ಕಾರ್ಯಾಗಾರದಲ್ಲಿ ಎಸ್‌ಪಿ ಬಿ.ಎಸ್. ನೇಮಗೌಡ

ಹೊಸ ಅಪರಾಧಿಕ ಕಾನೂನುಗಳ ಅರಿವು ಅಗತ್ಯ

■ ವಿಜಯಸಾಕ್ಷಿ ಸುದ್ದಿ, ಗದಗ

ಜನ ಸಾಮಾನ್ಯರಿಗೆ ಸೂಕ್ತ ರಕ್ಷಣೆಯನ್ನು ಸುಲಭವಾಗಿ ಒದಗಿಸುವ ಉದ್ದೇಶದಿಂದ ಹಲವು ಮಾರ್ಪಾಡುಗಳೊಂದಿಗೆ ಹೊಸದಾಗಿ ಜಾರಿಗೆ ತರಲಾಗುತ್ತಿರುವ ಅಪರಾಧಿಕ ಕಾಯಿದೆಗಳನ್ನು ಸಂಪೂರ್ಣವಾಗಿ ಅರಿತುಕೊಳ್ಳುವುದು ಅತ್ಯವಶ್ಯಕವಾಗಿದೆ. ಅಲ್ಲದೆ, ಇದು ಎಲ್ಲರ ಜವಾಬ್ದಾರಿಯೂ ಆಗಿದೆ ಎಂದು ಗದಗ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್. ನೇಮಗೌಡ ಹೇಳಿದರು.

ಶಹರದ ಕೆಎಲ್ಇ ಸಂಸ್ಥೆಯ ಎಸ್.ಎ. ಮಾನ್ವಿ ಕಾನೂನು ಮಹಾವಿದ್ಯಾಲಯ ಮತ್ತು ಗದಗ ಜಿಲ್ಲಾ ಪೊಲೀಸ್ ಇಲಾಖೆಯ ಸಹಯೋಗದಲ್ಲಿ ಗುರುವಾರ ಜೆ.ಟಿ. ಕಾಲೇಜಿನ ಸಭಾಂಗಣದಲ್ಲಿ ಪೊಲೀಸ್ ಸಿಬ್ಬಂದಿಗಳಿಗೆ ಹಮ್ಮಿಕೊಂಡಿದ್ದ ಹೊಸ ಅಪರಾಧಿಕ ಕಾನೂನುಗಳ

ಕುರಿತಾದ ಒಂದು ದಿನದ ಕಾರ್ಯಾಗಾರವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಬೆಂಗಳೂರಿನ ಕರ್ನಾಟಕ ಉಚ್ಚ ನ್ಯಾಯಾಲಯದ ನ್ಯಾಯವಾದಿ ಆರ್.ಎಂ. ಮಲ್ಲಿಕಾರ್ಜುನ ಮಾತನಾಡಿ, ಭಾರತೀಯ ಸುರಕ್ಷಾ ಸಂಹಿತೆಯಲ್ಲಿನ ಬದಲಾವಣೆಯ ಪಕ್ಷಿನೋಟದೊಂದಿಗೆ ಬಂಧನ ಮತ್ತು ಜಾಮೀನುಗಳ ಪ್ರಕ್ರಿಯೆಗಳ ಕುರಿತಾಗಿ ಮಾಹಿತಿಯನ್ನು ನೀಡಿದರು.

> ಕಾರ್ಯಾಗಾರದ ಪ್ರಥಮ ತಾಂತ್ರಿಕ ಗೋಷ್ಠಿಯಲ್ಲಿ ನ್ಯಾಯವಾದಿ ಸಿ.ಎನ್. ರಾಚಯ್ಯನವರ ಮಾತನಾಡಿ, ಭಾರತೀಯ ನ್ಯಾಯ ಸಂಹಿತೆಯಲ್ಲಿನ ಹೊಸ ಅಪರಾಧಗಳ ಕುರಿತಾಗಿ ಮಾಹಿತಿ ಒದಗಿಸಿದರು. ಮಹಾವಿದ್ಯಾಲಯದ ಸಹಾಯಕ ಪ್ರಾದ್ಯಾಪಕ ಡಾ. ವಿಜಯ ಮುರದಂಡೆ ಭಾರತೀಯ ಸಾಕ್ಷ ಅಧಿನಿಯಮದಲ್ಲಿಯ ಬದಲಾವಣೆಗಳ ಕುರಿತು ವಿವರಿಸಿದರು.

ಕಾರ್ಯಾಗಾರದಲ್ಲಿ ಮುಖ್ಯ ಅತಿಥಿಗಳಾಗಿ ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಸಂಕದ, ಅತಿಥಿಗಳಾಗಿ ಮಹಾವಿದ್ಯಾಲಯದ ಸ್

ಸಂಪಾದಕೀಯ

ಟೆಲಿಪ್ರಾಂಟರ್ ಇಲ್ಲದ ಅವಾಂತರ

ದೇಶಕ್ಕೆ ಸ್ವಾತಂತ್ರ್ಯ ದೊರಕಿಸಿ ಕೊಡುವಲ್ಲಿ ಬಹುದೊಡ್ಡ ಕೊಡುಗೆ ನೀಡಿದ ಮಹಾತ್ಮ ಗಾಂಧಿ, ಜಗತ್ತಿಗೆ ಹೆಚ್ಚು ಪರಿಚಯವಾಗಿದ್ದು ಅವರ ಕುರಿತಾದ ಸಿನಿಮಾ ಬಿಡುಗಡೆಯಾದ ನಂತರವೇ.

ಇಂಥದ್ದೊಂದು ಬಾಲಿಷ ಹೇಳಿಕೆ ನೀಡಿರುವುದು ದೇಶದ ಹೆಮ್ಮೆಯ ಪ್ರಧಾನಿ ನರೇಂದ್ರ ಮೋದಿ. ಪ್ರಧಾನಿ ಮೋದಿ ಇಂಥ ಹಲವಾರು ಬಾಲಿಷ ಹೇಳಿಕೆಗಳನ್ನು ನೀಡಿ ಇಕ್ಕಟ್ಟಿಗೆ ಸಿಲುಕಿದ ಅನೇಕ ಉದಾಹರಣೆಗಳಿವೆ.

ಅದರಲ್ಲೂ ಡಿಜಿಟಲ್ ಕ್ಯಾಮೆರಾ ಭಾರತಕ್ಕೆ ಬರುವ ಮುನ್ನವೇ, ತಮ್ಮ ಬಳಿ ಡಿಜಿಟಲ್ ಕ್ಯಾಮೆರಾ ಇತ್ತು. ಅದರಿಂದ ಫೋ-ಟೋ ತೆಗೆದು ಇಮೇಲ್ ಸಹ ಮಾಡಿದ್ದೆ ಎಂದು ಮೋದಿ ಸಂದರ್ಶನವೊಂದರಲ್ಲಿ ಹೇಳಿದ್ದು ಹಾಸ್ಯದ ವಸ್ತುವಾಗಿತ್ತು. ಡಿಜಿಟಲ್ ಕ್ಯಾಮೆರಾ ಭಾರತಕ್ಕೆ ಬರುವ ಮುನ್ನವೇ ಅದನ್ನು ಬಳಸಿದ ಮೂರ್ಖತನ ಒಂದೆಡೆಯಾದರೆ, ಸಂದರ್ಶಕರಿಗೂ ಯಾವ ಇಸವಿಯಲ್ಲಿ ಡಿಜಿಟಲ್ ಕ್ಯಾಮೆರಾ ಭಾರತಕ್ಕೆ ಬಂದಿತ್ತು ಎನ್ನುವದ ಮಾಹಿತಿ ಇಲ್ಲದೇ, ಹೇಳಿದ್ದನ್ನು ಕೇಳಿಸಿಕೊಂಡು ಬಂದ ಪತ್ರಕರ್ತರೂ ಮೂರ್ಖರೆ.

ಇಂಥ ಹಲವಾರು ಹೇಳಿಕೆಗಳಿಂದ ಮೋದಿ ಟೀಕೆಗೆ ಗುರಿಯಾಗಿದ್ದು ಮಾತ್ರವಲ್ಲದೇ, ಜನಸಾಮಾನ್ಯರು ಅಸಮಾಧಾನಕ್ಕೂ ತುತ್ತಾಗಿದ್ದರು. ಅದರಲ್ಲೂ ಪ್ರಸಕ್ತ ಲೋಕಸಭೆ ಚುನಾವಣೆ ಪ್ರಚಾರದಲ್ಲಿ ಇಂಥ ಅನೇಕ ಹೇಳಿಕೆಗಳನ್ನು ನೀಡಿ, ಮತ್ತೆ ಅದಕ್ಕೆ ತೇಪೆ ಹಚ್ಚುವ ಕೆಲಸ ಮಾಡಿದ್ದಾರೆ.

ಪ್ರಧಾನಿ ಇಂಥ ತಪ್ಪುಗಳನ್ನು ಪದೇ ಪದೇ ಮಾಡುತ್ತಿರುವುದಕ್ಕೆ ಮುಖ್ಯ ಕಾರಣ ಟೆಲಿಪ್ರಾಂಪ್ಟರ್. ಕಳೆದ ಒಂದು ದಶಕದ ಅವಧಿಯಲ್ಲಿ ಮೋದಿ ಟೆಲಿಪ್ರಾಂಪ್ಟರ್ ಇಲ್ಲದೇ ಮಾತಾಡಿದ್ದೆ ಇಲ್ಲ. ದೇಶದಲ್ಲಿ ಮಾತ್ರವಲ್ಲದೇ ವಿದೇಶದಲ್ಲೂ ಟೆಲಿಪ್ರಾಂಪ್ಟರ್ ಬಳಸಿಯೇ ಮೋದಿ ಭಾಷಣ ಮಾಡಿದ್ದರು.

ಮೋದಿ ಅವರ ಟೆಲಿಪ್ರಾಂಪ್ಟರ್ ಗೀಳು ಪ್ರತಿಪಕ್ಷಗಳ ಟೀಕೆಗೂ ವಸ್ತುವಾಗಿತ್ತು. ಆದರೂ ಟೆಲಿಪ್ರಾಂಪ್ಟರ್ ಬಳಸಿ ಮಾತನಾಡಿದ ಯಾವುದೆ ಭಾಷಣ ವಿವಾದಕ್ಕೆ ಕಾರಣವಾಗಿದ್ದಿಲ್ಲ. ಆದರೆ ಮೋದಿ ಯಾವಾಗ ಚುನಾವಣೆ ಪ್ರಚಾರದಲ್ಲಿ ಟೆಲಿಪ್ರಾಂಪ್ಟರ್ ಬಿಟ್ಟು ಮಾತಾಡಲು ಆರಂಭಿಸಿದರೋ, ಯಡವಟ್ಟುಗಳು ಶುರುವಾದವು. ಇನ್ನದರೂ ಪ್ರಧಾನಿ ಮೋದಿ, ಬಾಲಿಷ ಹೇಳಿಕೆ ನೀಡುವುದನ್ನು ಬಿಟ್ಟು ಟೆಲಿಪ್ರಾಂಪ್ಟರ್ ಬಳಸಿಯೇ ಮಾತಾಡುವುದು ಒಳಿತು.

ಮೇ 31, 'ವಿಶ್ವ ತಂಬಾಕು ರಹಿತ ದಿನ'ದ ನಿಮಿತ್ತ ಲೇಖನ

ತಂಬಾಕು ತ್ಯಜಿಸಿ ಸಂತೃಪ್ತ ಜೀವನ ನಡೆಸೋಣ

ಪ್ರಪಂಚದಾದ್ಯಂತ ಪ್ರತಿ ವರ್ಷ ಮೇ 31ರಂದು ಸಾರ್ವಜನಿಕರಲ್ಲಿ ತಂಬಾಕು ಸೇವನೆಯಿಂದಾಗುವ ಅಪಾಯಗಳು ಹಾಗೂ ಅವುಗಳನ್ನು ತಡೆಗಟ್ಟುವ ಕ್ರಮದ ಬಗ್ಗೆ ಗಮನ ಸೆಳೆಯಲು ಎಲ್ಲ ರಾಷ್ಟ್ರಗಳಿಂದ 'ವಿಶ್ವ ತಂಬಾಕು ರಹಿತ ದಿನ'ವನ್ನು ಆಚರಿಸಲಾಗುತ್ತದೆ. ಇದು ಕೇವಲ ಆಚರಣೆಯಾಗದೇ ತಂಬಾಕಿನಿಂದಾದ ಯಾವದೇ ಉತ್ಪನ್ನಗಳನ್ನು ಬಳಸದೇ ಆರೋಗ್ಯ, ಕ್ಷೇಮ ಹಾಗೂ ಚೈತನ್ಯಯುತವಾದ ಜೀವನ ನಡೆಸುವಂತೆ ಪ್ರೋತ್ಸಾಹಿಸಲು ಮತ್ತು ಯಾವುದೇ ರೀತಿಯ ಧೂಮಪಾನಿಗಳಿದ್ದರೆ ಅವರನ್ನು ವ್ಯಸನ ಮುಕ್ತಗೊಳಿಸಿ ಸಮಾಜದ ಮುಖ್ಯವಾಹಿನಿಗೆ ತರುವುದಾಗಿದೆ.

2024ರ ವಿಶ್ವತಂಬಾಕುರಹಿತ ದಿನದ ಥೀಮ್ 'ತಂಬಾಕು ಉದ್ಯಮದ ಹಸ್ತಕ್ಷೇಪದಿಂದ ಮಕ್ಕಳನ್ನು ರಕ್ಷಿಸುವುದು' ಎಂದಾಗಿದೆ. ಏಕೆಂದರೆ ಇಂದಿನ ದಿನಗಳಲ್ಲಿ ಮಕ್ಕಳೇ ಹೆಚ್ಚಾಗಿ ಮಾದಕ ವ್ಯಸನಿಗಳಾಗುತ್ತಿದ್ದಾರೆ. ಇದಕ್ಕೆ ಕಾರಣ ಸಮಾಜಿಕ ಜಾಲತಾಣಗಳು. ತಂಬಾಕು ಉತ್ಪನ್ನಗಳನ್ನು ಮಾರುವುದಕ್ಕಾಗಿ ಅತೀ ಆಕರ್ಷಣೀಯವಾದ, ನೆಚ್ಚಿನ ನಟ-ನಟಿಯರಿಂದ ಮಾರು ಹೋಗುವಂತಹ ಜಾಹಿರಾತು ಪ್ರದರ್ಶಿಸುವುದರಿಂದ, ಆಮಿಷದಿಂದ, ಗೆಳೆಯ-ಗೆಳತಿಯರೊಂದಿಗೆ ತಮಾಷೆಗಾಗಿ ಪ್ರಾರಂಭವಾಗಿ ಚಟವಾಗಿ ಚಟ್ಟ ಕಟ್ಟುವುದರ ತನಕ ಅವರ ಸಂಸಾರವನ್ನು ರಸ್ತೆಗೆ ತರುವವರಗೂ ತಂಬಾಕು ಬಿಡುವುದಿಲ್ಲ.

ತಂಬಾಕು ವಿಶ್ವದಾದ್ಯಂತ ಬೆಳೆಯುವ ನಿಕೋಟಿಯಾನಾ ಕುಟುಂಬದ ಸಸ್ಯಗಳ ತಾಜಾ ಎಲೆಗಳಿಂದ ತಯಾರಿಸಲ್ಪಡುವ ಒಂದು ಕೃಷಿ ಉತ್ಪನ್ನವಾಗಿದೆ. ಇವುಗಳಲ್ಲಿ ನಿಕೋಟಿಯಾನಾ ಟಬಾಕಮ್ ಜಾತಿಯ ಸಸ್ಯ ಅತೀ ಹೆಚ್ಚು ಬಳಕೆಯಲ್ಲಿದೆ. ತಂಬಾಕಿನಲ್ಲಿಯ ಮಾದಕ ರಾಸಾಯನಿಕ ವಸ್ತುವನ್ನು ತಂಬಾಕಿನ ಎಲೆಗಳನ್ನು ಕಟಾವು ಮಾಡಿ ಉತ್ಕರ್ಷಣೆ(ಆಕ್ಸಿಡೆಶನ್)ಗೆ ಒಳಪಡಿಸಿದಾಗ ಎಲೆಗಳಲ್ಲಿನ ಕ್ಯಾರೋಟಿನಾಯ್ಡಗಳು ನಶಿಸಿ ನಶೆಯ ರುಚಿ ಹೆಚ್ಚಿಗೆ ಆಗುತ್ತದೆ. ಇದರೊಂದಿಗೆ ತಂಬಾಕಿನ ಪಿ.ಹೆಚ್ ಬದಲಾಯಿಸಲು ಹಲವಾರು ಇತರೆ ರಾಸಾಯನಿಕಗಳನ್ನು ಬೆರೆಸುತ್ತಾರೆ. ಇವುಗಳು ಒಟ್ಟಾರೆ ಜನರನ್ನು ತಂಬಾಕಿನ ಉತ್ಪನ್ನಗಳಿಗೆ ಅಂಟಿಕೊಳ್ಳುವಂತೆ ಮಾಡುತ್ತವೆ.

ಅವಿದ್ಯೆ, ಬಡತನ, ದುರ್ಜನರ ಸಂಗ ಹಾಗೂ ಮಾನಸಿಕ ಒತ್ತಡ ಈ ರೀತಿಯಾಗಿ ಯಾವುದೋ ಒಂದು ಕಾರಣಕ್ಕೆ ತಂಬಾಕು ಉತ್ಪನ್ನಗಳಿಗೆ ಬಲಿಯಾಗಿ ಅದರ ದಾಸನಾಗಿ ವಾಸಿಯಾಗದಂತಹ ರೋಗಗಳಿಗೆ ತುತ್ತಾಗಿ ಅಮೂಲ್ಯವಾದ ಜೀವನ ಹಾಳು ಮಾಡಿಕೊಳ್ಳುತ್ತಿದ್ದಾನೆ. ಈ ಕುರಿತು ಜಾಗತಿಕವಾಗಿ ಸಮೀಕ್ಷೆ ಮಾಡಲಾಗಿ ಶೇ. 22.3ರಷ್ಟು ಜನ ತಂಬಾಕಿನ ವ್ಯಸನಿಗಳಾಗಿದ್ದಾರೆ. ಇದರಲ್ಲಿ ಶೇ. 36.7 ಪುರುಷರಾದರೆ, ಮಹಿಳೆಯರು ಶೇ. 7.8ರಷ್ಟಿದ್ದಾರೆ. ಚೀನಾ ತಂಬಾಕು ಉತ್ಪನ್ನಗಳನ್ನು ಅತಿ ಹೆಚ್ಚು ಉತ್ಪಾದಿಸುವ ಹಾಗೂ ಬಳಸುವ ಪ್ರಥಮ ರಾಷ್ಟ್ರವಾಗಿದ್ದರೆ, ಭಾರತ ಮೂರನೇ ಸ್ಥಾನದಲ್ಲಿದೆ. ಬಡತನ ರೇಖೆಗಿಂತ ಕೆಳಗಿರುವ ರಾಷ್ಟ್ರದ ಪ್ರಜೆಗಳು ಹೆಚ್ಚಿನ ಸಂಖ್ಯೆಯಲ್ಲಿ ತಂಬಾಕಿನ ಉತ್ಪನ್ನಗಳಿಗೆ ವ್ಯಸನಿಗಳಾಗುತ್ತಿದ್ದಾರೆ. ಇವರಲ್ಲಿ ಹೆಚ್ಚಾಗಿ ರೈತರು, ಬಡ ಕಾರ್ಮಿಕರು, ಶಾಲಾ-ಕಾಲೇಜು ಮಕ್ಕಳು, ಏಕಾಂಗಿಗಳು, ಬಹು ದಿನಗಳವರೆಗೆ ಕುಟುಂಬದಿಂದ ದೂರವಿರುವವರು ಇತ್ಯಾದಿ ರೀತಿಯ ಜನರು ಸ್ವಾಭಾವಿಕವಾಗಿ ತಂಬಾಕು ಉತ್ಪನ್ನಗಳ ವ್ಯಸನಿಗಳಾಗಿರುತ್ತಾರೆ.

ತಂಬಾಕು ಉತ್ಪನ್ನಗಳಾದ ಬೀಡಿ, ಸೀಗರೇಟ್, ಗುಟಕಾ, ಚಿರೂಟ್, ಹುಕ್ಕಾ, ಅಥವಾ ನೇರವಾಗಿ ತಂಬಾಕನ್ನು ಜಗಿಯುವುದು, ಕರಗಬಹುದಾದ ನಿಕೋಟಿನ್ ಉತ್ಪನ್ನಗಳು ಇತ್ಯಾದಿ. ಇವುಗಳಲ್ಲಿ ಯಾವುದೇ ಉತ್ಪನ್ನಗಳನ್ನು ಬಳಸಿದರೂ ಕ್ಷಯ, ಶ್ವಾಸಕೋಶದ ಕಾಯಿಲೆಗಳು, ಅಸ್ತಮಾ, ಹೃದಯ ಸಂಬಂಧಿ ರೋಗಗಳು, ದೀರ್ಘಕಾಲದ ಬಳಕೆಯಿಂದ ಕಡಿಮೆಯಾಗದ ಶ್ವಾಸಕೋಶದ ಸೊಂಕು ಹಾಗೂ ಕ್ಯಾನ್ಸರ್ ರೋಗಗಳು ಉಂಟಾಗುತ್ತವೆ. ಈ ಎಲ್ಲ ಅಂಶಗಳನ್ನು ಗಮನದಲ್ಲಿಟ್ಟುಕೊಂಡು ವಿಶ್ವಆರೋಗ್ಯ ಸಂಸ್ಥೆ ವಿಶ್ವದಾದ್ಯಂತ ತಂಬಾಕು ಕುರಿತು ಜನಜಾಗೃತಿ ಮೂಡಿಸುವುದಕ್ಕಾಗಿ 1987ರ ಮೇ 31ರಿಂದ ತಂಬಾಕುರಹಿತ ದಿನಾಚರಣೆಯನ್ನು ಆಚರಣೆಗೆ ತಂದಿದ್ದಾರೆ.

ಔಷಧಿಯಾಗಿಯೂ ಬಳಕೆಯಾಗುತ್ತಿರುವ ತಂಬಾಕನ್ನು ಸರ್ಕಾರದ ಒಪ್ಪಿಗೆಯೊಂದಿಗೆ ಸರಿ ಸುಮಾರು 35 ಲಕ್ಷ ಹೇಕ್ಟೆರ್ ಪ್ರದೇಶಗಳಲ್ಲಿ ವಿಶ್ವದಾದ್ಯಂತ ಇಗಲೂ ಬೆಳೆಯುತ್ತಾರೆ. ಈ ಉತ್ಪನ್ನದ ಬೇಡಿಕೆ ಹೆಚ್ಚುತ್ತಿದ್ದಂತೆ ಪ್ರತಿ ವರ್ಷ 2 ಲಕ್ಷ ಹೆಕ್ಟೆರ್‌ನಷ್ಟು ಕೃಷಿ ಅಥವಾ ಕೃಷಿಯೇತರ ಭೂಮಿಯನ್ನು ತಂಬಾಕು ಬೆಳೆಯಲು ಬಳಕೆ ಮಾಡಿಕೊಂಡು, ರೈತರು ಪರಿಸರ ಮಾಲಿನ್ಯ ಉಂಟು ಮಾಡುತ್ತಿದ್ದಾರೆ. ತಂಬಾಕು ಉತ್ಪನ್ನಕ್ಕಾಗಿ ಹೆಚ್ಚುವರಿಯಾಗಿ, ರಾಸಾಯನಿಕ ಗೊಬ್ಬರಗಳು, ಕೀಟನಾಶಕಗಳನ್ನು ಬಳಸುತ್ತಿರುವುದರಂದ ಮಣ್ಣಿನ ಫಲವತ್ತತೆ ಕಡಿವೆಯಾಗಿ ಮತ್ತು ಭೂಸವಕಳಿಗೆ ಕಾರಣವಾಗುತ್ತಿದೆ.

ತಿಳಿದೋ ತಿಳಿಯದೆಯೋ ತಂಬಾಕು ಉತ್ಪನ್ನಗಳಿಗೆ ದಾಸನಾಗುವ ಮೊದಲು ತಂಬಾಕಿನ ಕ್ರೂರ ಮುಖವನ್ನು ಅರಿತು ನಾವಾಯಿತು ಎಂಬಂತೆ ನಮ್ಮ ಕುಟುಂಬದ ಸದಸ್ಯರು ಹಾಗೂ ನೆಂಟರು, ಸಮಾಜದ ಪ್ರತಿ ಹಂತದ ವ್ಯಕ್ತಿಯೂ ಅರ್ಥೈಸಿಕೊಂಡು ಜೀವನವನ್ನು ಸಾರ್ಥಕ ಪಡಿಸಿಕೊಳ್ಳುವುದಾಗಿದೆ. ತಂಬಾಕು ಉತ್ಪನ್ನಗಳನ್ನು ತ್ಯಜಿಸೋಣ, ಸುಖ-ಸಂತೃಪ್ತ ಜೀವನ ನಡೆಸೋಣ.

– ರಾಮಚಂದ್ರ ಮೋನೆ



ವಿಜ್ಞಾನ ಶಿಕ್ಷಕರು, ವಿದ್ಯಾದಾನ ಸಮಿತಿ ಬಾಲಕರ ಪ್ರೌಢಶಾಲೆ-ಗದಗ.

ಇನ್‌ಸ್ಟಾಗ್ರಾಮ್‌ನಲ್ಲಿ 44 ಮಿಲಿಯನ್ ಬಾರಿ ಶೇರ್ ಆಯ್ತು 'ಆಲ್ ಐಸ್ ಆನ್ ರಾಫಾ' ಚಿತ್ರ

■ ವಿಜಯಸಾಕ್ಷಿ ಸುದ್ದಿ, ಗಜಾ

ಗಜಾ ನಗರದಿಂದ ಸ್ಥಳಾಂತರಗೊಂಡ ಪ್ಯಾಲೆಸ್ಟೀನಿಯನ್ನರ ಶಿಬಿರದಲ್ಲಿ ಇಸ್ರೇಲಿ ಮಾರಣಾಂತಿಕ ದಾಳಿಯ ನಂತರ ಸೋಮವಾರದಿಂದ "ಎಲ್ಲ ಕಣ್ಣುಗಳು ರಫಾಹ್" (ಂಟಟ ಇಥಿಜಿ ಔಟಿ ಖಚಿಜಿಚಿ) ಎಂಬ ಪದಗಳನ್ನು ಹೊಂದಿರುವ ಎಐ ರಚಿತವಾದ ಚಿತ್ರವನ್ನು 44 ದಶಲಕ್ಷಕ್ಕೂ ಹೆಚ್ಚು ಇನ್‌ಸ್ಟಾಗ್ರಾಮ್ ಖಾತೆಗಳಿಂದ ಹಂಚಿಕೊಳ್ಳಲಾಗಿದೆ.

ಹಮಾಸ್ ವಿರುದ್ಧ ಇಸ್ರೇಲ್‌ನ ಮಿಲಿಟರಿ ಕಾರ್ಯಾಚರಣೆಯ ಸಮಯದಲ್ಲಿ ಅಲ್ಲಿಗೆ ಓಡಿಹೋದ ಲಕ್ಷಾಂತರ ಪ್ಯಾಲೆಸ್ಟೀನಿಯನ್ನರನ್ನು ಸೂಚಿಸುವ, ಪರ್ವತಗಳಿಂದ ಆವೃತವಾಗಿರುವ ಮರುಭೂಮಿಯ ಭೂದೃಶ್ಯದಾದ್ಯಂತ ಅಂತ್ಯವಿಲ್ಲದೆ ಚಾಚಿಕೊಂಡಿರುವ ಡೇರೆಗಳ ಸಾಲುಗಳನ್ನು ಚಿತ್ರವು ತೋರಿಸುತ್ತಿದೆ.

ಚಿಲಿ-ಯುಎಸ್ ನಟ ಪೆಡ್ರೊ ಪ್ಯಾಸ್ಕಲ್, ಪ್ಯಾಲೇಸ್ಟಿನಿಯನ್ ಮೂಲದ ಟಾಪ್ ಮಾಡೆಲ್‌ಗಳಾದ ಬೆಲ್ಲಾ, ಗಿಗಿ ಹಡಿಡ್ ಮತ್ತು ಫ್ರೆಂಚ್ ಫುಟ್‌ಬಾಲ್ ತಾರೆ ಉಸ್ಮಾನೆ ಡೆಂಬೆಲೆ ಇದನ್ನು ಇನ್‌ಸ್ಟಾಗ್ರಾಮ್‌ನಲ್ಲಿ ಹಂಚಿಕೊಂಡಿರುವ ಸೆಲೆಬ್ರಿಟಿಗಳಲ್ಲಿ ಸೇರಿದ್ದಾರೆ.

ಆನ್‌ಲೈನ್ ಮಾನಿಟರ್ ವಿಸಿಬ್ರೇನ್ ಪ್ರಕಾರ, "ಆಲ್ ಐಸ್ ಆನ್ ರಾಫಾ" ಎಂಬ ಘೋಷಣೆಯನ್ನು ಇತರ ಪ್ರಕಟಣೆಗಳು ಮತ್ತು ಸಾಮಾಜಿಕ ನೆಟ್‌ವರ್ಕ್‌ಗಳಲ್ಲಿ ವ್ಯಾಪಕವಾಗಿ ಹಂಚಿಕೊಳ್ಳಲಾಗಿದೆ, ವಿಶೇಷವಾಗಿ ಎಕ್ಸ್, ಹ್ಯಾಶ್‌ಟ್ಯಾಗ್ #alleyesonrafah ಸುಮಾರು ಒಂದು ಮಿಲಿಯನ್ ಹಿಟ್‌ಗಳನ್ನು ಕಂಡಿದೆ.

ಈಜಿಪ್ಟ್‌ನ ಗಡಿಯಲ್ಲಿರುವ ದಕ್ಷಿಣ ಗಜಾ ನಗರದ ಮೇಲಿನ ದಾಳಿಯ ಬಗ್ಗೆ ಮೂರು ದಿನಗಳಲ್ಲಿ ಎಕ್ಸ್ ವೇದಿಕೆಯಲ್ಲಿ 27.5 ಮಿಲಿಯನ್ ಸಂದೇಶಗಳನ್ನು ಪ್ರಕಟಿಸಲಾಗಿದೆ; ಇದು ಅಂತರರಾಷ್ಟ್ರೀಯವಾಗಿ ಆಕ್ರೋಶವನ್ನು ಉಂಟುಮಾಡಿದೆ.

ಶಿಬಿರದ ಮೇಲೆ ಇಸ್ರೇಲಿ ನಡೆಸಿದ ದಾಳಿಯಲ್ಲಿ ಭಾನುವಾರ ಬೆಂಕಿ ಕಾಣಿಸಿಕೊಂಡು 45 ಜನರು ಸಾವನ್ನಪ್ಪಿದರು. 249 ಮಂದಿ ಗಾಯಗೊಂಡರು ಎಂದು ಗಾಜಾದ ಹಮಾಸ್ ನಡೆಸುತ್ತಿರುವ ಆರೋಗ್ಯ ಸಚಿವಾಲಯ ತಿಳಿಸಿದೆ.

'ವಿಶ್ವ ತಂಬಾಕು ರಹಿತ ದಿನ' ಆಚರಣೆ ಪ್ರಯುಕ್ತ ಕವನ

'ತಂಬಾಕು' ಮಜಾ-ಸಜಾ

ಮಜವಾಗಿರುತ್ತೆ ಬಾಳ ಮಜವಾಗಿರುತ್ತೆ
ಸಿಗರೇಟು ಸೇದುವಾಗ ಚನ್ನಾಗಿರುತ್ತೆ
ಬರಬರತಾ ದೇಹಕ್ಕೆ ಒಂದೊಂದೇ ರೋಗ ಬಂದು
ತಡೆಯಕಾಗದೆ ಪ್ರಾಣಪಕ್ಷಿ ಹಾರಿಹೋಗುತ್ತೆ ॥ಪ ॥

ಗಂಡು ಹೆಣ್ಣು ಭೇದ ಇಲ್ದೆ ತಂಬಾಕು ತಿಂತಾರಲ್ಲ
ದುಡ್ ಕೊಟ್ಟು ಎಲ್ಲಾರೂ ರೋಗಾನ ತರ್ತಾರಲ್ಲ
ಚಟವನ್ನು ಕಲಿಯೋಕ್ ಮೊದಲು ಇರಬೇಕು ಎಚ್ಚರಿಕೆ
ನಾಳಿಂದ ಬಿಟ್ಟಿಡತೀನಿ ಅನ್ನೋದೆಲ್ಲ ಬೂಟಾಟಿಕೆ
ನಮಗೆ ನಮ್ಮವರಿಗೆ ನೆಮ್ಮದಿಯ ತರಬೇಕು
ತರವಲ್ಲ ತಂಬಾಕು ಛಲದಿಂದ ಬಿಡಬೇಕು ॥ 1 ॥

ಸಿಗರೇಟು ಬೀಡಿ, ಗಾಂಜಾ ಸೇದಬೇಡಿ
ಗುಟಕಾ, ಮಾವಾ ಎಲ್ಲ ಟಾನಿಕ್ ಅನ್ಕೊಬೇಡಿ
ಚಟವೇನು ಚಟುವಟಿಕೆ ಮೂಲವಲ್ಲ ನೋಡಿ
ದುಡ್ಡಿಂದ ಔಷದ ಸಿಕ್ರೂ ಆರೋಗ್ಯ ಸಿಗಲ್ಲ ಬಿಡಿ
ಸ್ವಸ್ಥ್ಯ ವಿಚಾರ, ಒಳ್ಳೆಯ ಜೀವನ
ಬದುಕಲು ಕಲಿಯೋಣ, ಇರೋದೊಂದು ಜೀವನ

– ಮಂಜುನಾಥ ಸಜ್ಜನರ.

ರೆಮಲ್ ಚಂಡಮಾರುತ ಪ್ರಭಾವ; ಈಶಾನ್ಯ ಭಾರತದಲ್ಲಿ ರೈಲು ಸೇವೆಗಳು ಸ್ಥಗಿತ

■ ವಿಜಯಸಾಕ್ಷಿ ಸುದ್ದಿ, ಅಸ್ಸಾಂ

'ರೆಮಲ್' ಚಂಡ ಮಾರುತದಿಂದ ಉಂಟಾದ ಭಾರೀ ಮಳೆಯ ನಂತರ ಅಸ್ಸಾಂನ ದಿಮಾ ಹಸಾವೊ ಜಿಲ್ಲೆಯ ಭಾಗಗಳಲ್ಲಿ ಜಲಾವೃತ ವಾಗಿದ್ದು, ರೈಲ್ವೆ ಹಳಿಗಳಿಗೆ ಸಾಕಷ್ಟು ಹಾನಿಯಾಗಿದೆ. ಇದರಿಂದ, ತ್ರಿಪುರ ಸೇರಿದಂತೆ ಈಶಾನ್ಯದಲ್ಲಿ ರೈಲು ಸೇವೆಗಳು ಅಸ್ತವ್ಯಸ್ತಗೊಂಡಿವೆ ಎಂದು ಈಶಾನ್ಯ ಫ್ರಾಂಟಿಯರ್ ರೈಲ್ವೇಸ್ (ಎನ್‌ಎಫ್‌ಆರ್) ನ್ಯೂ ಹಫ್ಲಾಂಗ್-ಬಂದರ್ಖಾಲ್ ವಿಭಾಗದ ಅಧಿಕಾರಿಗಳು ಮಾಹಿತಿ ನೀಡಿದ್ದಾರೆ.

ಎನ್‌ಎಫ್‌ಆರ್ ಗುವಾಹಟಿ-ದುಲ್ಲಾಬ್‌ಚೆರ್ರಾ ಎಕ್ಸ್‌ಪ್ರೆಸ್, ರಂಗಿಯಾ-ಸಿಲ್ಚಾರ್ ಎಕ್ಸ್‌ಪ್ರೆಸ್, ಗುವಾಹಟಿ-ಅಗರ್ತಲಾ ವಿಶೇಷ ರೈಲು, ಗುವಾಹಟಿ-ಸಿಲ್ಚಾರ್ ಎಕ್ಸ್‌ಪ್ರೆಸ್, ಸಿಲ್ಚಾರ್-ಸಿಕಂದರಾಬಾದ್ ಎಕ್ಸ್‌ಪ್ರೆಸ್ ಮತ್ತು ಅಗರ್ತಲಾ ಮತ್ತು ಮುಂಬೈಗೆ ಸಂಪರ್ಕಿಸುವ ಲೋಕಮಾನ್ಯ ಎಕ್ಸ್‌ಪ್ರೆಸ್ ಅನ್ನು ರದ್ದುಗೊಳಿಸಿದೆ.

ಆದಾಗ್ಯೂ, ರೆಮೆಲ್‌ನಿಂದ ಸಂಚಾರ ತಪ್ಪಿಸಿಕೊಂಡಿರುವ ಪ್ರಯಾಣಿಕರಿಗಾಗಿ ಮೇ 30 ರಂದು ಗುವಾಹಟಿಯಿಂದ ಸೀಲ್ದಾಹ್‌ಗೆ ಏಕಮುಖ ವಿಶೇಷ ರೈಲನ್ನು ಓಡಿಸಲಿದೆ.

ಇದಲ್ಲದೆ, ಕೊಯ ಮತ್ತೂರು-ಸಿಲ್ಚಾರ್ ಎಕ್ಸ್‌ಪ್ರೆಸ್, ಅಗರ್ತಲಾವನ್ನು ಪಂಜಾಬ್‌ನ ಫಿರೋಜ್‌ಪುರ ಕಂಟೋನ್ಮೆಂಟ್ ನಿಲ್ದಾಣ ದೊಂದಿಗೆ ಸಂಪರ್ಕಿಸುವ ತ್ರಿಪುರಸುಂದರಿ ಎಕ್ಸ್‌ಪ್ರೆಸ್, ಪಶ್ಚಿಮ ಬಂಗಾಳ ಮತ್ತು ಅಗರ್ತಲಾ ಮತ್ತು ಅಗರ್ತಲದ ಸೀಲ್ದಾವನ್ನು ಸಂಪರ್ಕಿಸುವ ಕಾಂಚನ್‌ಜುಂಗಾ ಎಕ್ಸ್‌ಪ್ರೆಸ್, ಸಿಲ್ಚಾರ್-ಗುವಾಹಟಿ ಎಕ್ಸ್‌ಪ್ರೆಸ್, ಅಗರ್ತಲಾ-ಕೋಲ್ಕತ್ತಾ ವಿಶೇಷ ಎಕ್ಸ್‌ಪ್ರೆಸ್ ಸೇರಿದಂತೆ ಹಲವು ರೈಲುಗಳನ್ನು ಭಾಗಶಃ ರದ್ದುಗೊಳಿಸಲಾಗಿದೆ. ಅಸ್ಸಾಂನ ಕೆಲವು ಭಾಗಗಳು ಭೂಕುಸಿತ ಮತ್ತು ಜಲಾವೃತದಿಂದಾಗಿ.

ಹತ್ತಿರದ ನದಿಗಳಲ್ಲಿ ನೀರಿನ ಮಟ್ಟವು ಅಪಾಯದ ಮಟ್ಟದಲ್ಲಿ ಹರಿಯುತ್ತಿರುವುದರಿಂದ ಅಡಚಣೆಗಳು ಉಂಟಾಗಿವೆ ಎಂದು ಎನ್‌ಎಫ್‌ಆರ್ ಅಧಿಕಾರಿ ತಿಳಿಸಿದ್ದಾರೆ. ಅವರು ಈಗಾಗಲೇ ರೈಲ್ವೆ ಸೇವೆಗಳನ್ನು ಪುನಃಸ್ಥಾಪಿಸಲು ಕಾರ್ಮಿಕರನ್ನು ನಿಯೋಜಿಸಿದ್ದರೂ, ಅವರು ಇನ್ನೂ ಪೂರ್ಣ ಪ್ರಮಾಣದ ಕೆಲಸವನ್ನು ಪ್ರಾರಂಭಿಸಿಲ್ಲ ಎಂದು ಹೇಳಿದರು.

ರಾಷ್ಟ್ರ ರಾಜಧಾನಿಯಲ್ಲಿ ತೀವ್ರಗೊಂಡ ಬಿಸಿ ಗಾಳಿ; ಬಿಹಾರದ ವ್ಯಕ್ತಿ ದೆಹಲಿ ಆಸ್ಪತ್ರೆಯಲ್ಲಿ ಸಾವು

■ ವಿಜಯಸಾಕ್ಷಿ ಸುದ್ದಿ, ನವದೆಹಲಿ

ರಾಷ್ಟ್ರ ರಾಜಧಾನಿಯಲ್ಲಿ ದಾಖಲೆಯ ಬಿಸಿ ಗಾಳಿ ಸಮಯದಲ್ಲಿ ಶಾಖದ ಹೊಡೆತಕ್ಕೆ ಒಳಗಾಗಿದ್ದ ಬಿಹಾರದ ದರ್ಭಾಂಗದ 40 ವರ್ಷದ ವ್ಯಕ್ತಿ ನಿನ್ನೆ ದೆಹಲಿಯ ರಾಮ್ ಮನೋಹರ್ ಲೋಹಿಯಾ ಆಸ್ಪತ್ರೆಯಲ್ಲಿ ಸಾವನ್ನಪ್ಪಿದ್ದಾರೆ. ಜ್ವರ ತೀವ್ರಗೊಂಡಿದ್ದರಿಂದ ಅವರನ್ನು ಸೋಮವಾರ ತಡರಾತ್ರಿ ಆಸ್ಪತ್ರೆಗೆ ದಾಖಲಿಸಲಾಗಿತ್ತು ಎನ್ನಲಾಗಿದೆ.

ಮೃತ ವ್ಯಕ್ತಿ ಕೂಲರ್ ಅಥವಾ ಫ್ಯಾನ್ ಇಲ್ಲದ ಕೋಣೆಯಲ್ಲಿ ವಾಸಿಸುತ್ತಿದ್ದರು, ತೀವ್ರ ಜ್ವರವಿದ್ದ ಕಾಖ

ಕೋಗನೂರ ಗ್ರಾ.ಪಂ ವ್ಯಾಪ್ತಿಯ ಸರಕಾರಿ ಗೋಮಾಳದಲ್ಲಿ 1 ಸಾವಿರ ಟ್ರೆಂಚ್‌ಗಳ ನಿರ್ಮಾಣ

ಮಣ್ಣು, ನೀರು ಸಂರಕ್ಷಣೆಯ ಹೆಜ್ಜೆ

■ ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಇತ್ತೀಚೆಗೆ ಸರಕಾರ ಮಣ್ಣು ಮತ್ತು ನೀರು ಸಂರಕ್ಷಣೆಯ ಸಲುವಾಗಿ ವಿವಿಧ ಇಲಾಖೆಗಳ ಮೂಲಕ ಅನುದಾನ ಒದಗಿಸುತ್ತಿದೆ. ಇವುಗಳಲ್ಲಿ ವಿಶೇಷವಾಗಿ ಅರಣ್ಯ ಪ್ರದೇಶಗಳಲ್ಲಿ ನಿರ್ಮಿಸುವ ಟ್ರೆಂಚ್ (ಗುಂಡಿ)ಗಳಲ್ಲಿ ಮಳೆಗಾಲದಲ್ಲಿ ನೀರು ಸಂಗ್ರಹವಾಗುತ್ತಿರುವದರಿಂದ ಸುತ್ತಮುತ್ತಲಿನ ಪ್ರದೇಶಗಳಲ್ಲಿ ಅಂತರ್ಜಲ ಮಟ್ಟ ಹೆಚ್ಚುತ್ತಿದೆ.

ಶಿರಹಟ್ಟಿ ತಾಲೂಕಿನ ಕೋಗನೂರ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಸರಕಾರಿ ಗೋಮಾಳದಲ್ಲಿ ಸಾಮಾಜಿಕ ಅರಣ್ಯ ಇಲಾಖೆ ವತಿಯಿಂದ ನರೇಗಾ ಯೋಜನೆಯಡಿ 2022-23ರಲ್ಲಿ ಮಣ್ಣು ಮತ್ತು ನೀರು ಸಂರಕ್ಷಣಾ ಕಾಮಗಾರಿಯಲ್ಲಿ ಸುಮಾರು 1 ಸಾವಿರ ಟ್ರೆಂಚ್‌ಗಳನ್ನು ನಿರ್ಮಿಸಲಾಗಿದ್ದು, ಇದಕ್ಕೆ 1469 ಮಾನವ ದಿನಗಳನ್ನು ಸೃಜಿಸಲಾಗಿದೆ. ಈ ಟ್ರೆಂಚ್‌ಗಳಲ್ಲಿ ಇತ್ತೀಚೆಗೆ ಸುರಿದ ಮಳೆಯಿಂದ ನೀರು ಸಂಗ್ರಹವಾಗಿದೆ. 1 ಘಮೀಗೆ 1 ಸಾವಿರ ಲೀಟರ್ ನೀರು ಶೇಖರಣೆ ಸಾಮರ್ಥ್ಯವನ್ನು ಈ ಟ್ರೆಂಚ್‌ಗಳು ಹೊಂದಿವೆ.

ಅರಣ್ಯ ಇಲಾಖೆ ಬಹುತೇಕವಾಗಿ ಅರಣ್ಯ

ಪ್ರದೇಶಗಳ ಇಳಿಜಾರಿನಲ್ಲಿ ಇಂತಹ ಟ್ರೆಂಚ್‌ಗಳನ್ನು ನಿರ್ಮಿಸುವುದರಿಂದ ಸಹಜವಾಗಿಯೇ ಮಳೆ ಬಂದ ಸಂದರ್ಭದಲ್ಲಿ ಮಣ್ಣು ಮತ್ತು ನೀರು ಸಂರಕ್ಷಣೆಯಾಗಲಿದೆ. ಇದರಿಂದ ಅರಣ್ಯ ಪ್ರದೇಶದಲ್ಲಿರುವ ಪ್ರಾಣಿ-ಪಕ್ಷಿಗಳಿಗೆ ಕುಡಿಯುವ ನೀರು ಜೊತೆಗೆ ಅಂತರ್ಜಲ ಹೆಚ್ಚಳಕ್ಕೂ ಸಹಕಾರಿಯಾಗಲಿದೆ. ಸುತ್ತಮುತ್ತ ಇರುವ ಬೋರ್‌ವೆಲ್‌ಗಳ ರಿಚಾರ್ಜ್‌ಗೂ ಇದು ಸಹಕಾರಿಯಾಗಲಿದೆ.

ಮಣ್ಣು ಮತ್ತು ನೀರನ್ನು ಸಂರಕ್ಷಿಸುವುದಕ್ಕಾಗಿ ನಿರ್ಮಿಸಲಾಗುವ ಟ್ರೆಂಚ್‌ಗಳಲ್ಲಿ ಸಹಜವಾಗಿಯೇ ಮಳೆಗಾಲದಲ್ಲಿ ನೀರು ಶೇಖರಣೆಯಾಗುತ್ತದೆ. ಇದರಿಂದ ಸುತ್ತಮುತ್ತ ಇರುವಂತಹ ಪ್ರದೇಶವು ತೇವಾಂಶ ಹಿಡಿದಿಟ್ಟುಕೊಳ್ಳಲು ಸಹಕಾರಿಯಾಗುತ್ತದೆ. ನಂತರ ಈ ಪ್ರದೇಶದಲ್ಲಿ ಪ್ಲಾಂಟೇಶನ್ ಮಾಡಲು ಸಹ ಅರಣ್ಯ ಇಲಾಖೆ ಸಿದ್ಧತೆ ಮಾಡಿಕೊಳ್ಳುತ್ತಿದ್ದು, ಇದರಿಂದ ಹೆಚ್ಚು ಹಸಿರು ಪ್ರದೇಶವನ್ನು ನಿರ್ಮಿಸುವ ಗುರಿ ಹೊಂದಿದೆ. ಇತ್ತೀಚೆಗೆ ಬೇಸಿಗೆ ಕಾಲದಲ್ಲೂ ಸಹ ರಸ್ತೆ ಬದಿ ನೆಟ್ಟ ಗಿಡಗಳಿಗೆ ಬಾಡಿಗೆ ಟ್ರಾಕ್ಟರ್ ಮತ್ತು ಟ್ಯಾಂಕರ್‌ಗಳನ್ನು ಬಳಸಿ ಗಿಡಗಳಿಗೆ ನೀರು

ಈ ಕುರಿತು ಪ್ರತಿಕ್ರಿಯಿಸಿದ ಸಾಮಾಜಿಕ ವಲಯ ಅರಣ್ಯಾಧಿಕಾರಿ ಕೌಶಿಕ್ ದಳವಾಯಿ, ಸರಕಾರಿ ಗೋಮಾಳ ಜಾಗೆಯಲ್ಲಿ ನರೇಗಾದ ಮಣ್ಣು ಮತ್ತು ನೀರು ಸಂರಕ್ಷಣೆ ಯೋಜನೆಯಡಿ 1 ಸಾವಿರ ಟ್ರೆಂಚ್‌ಗಳನ್ನು ನಿರ್ಮಿಸಲಾಗಿದ್ದು, ಇತ್ತೀಚೆಗೆ ಸುರಿದ ಮಳೆಯಿಂದ ಟ್ರೆಂಚ್‌ಗಳಲ್ಲಿ ಅಧಿಕ ಪ್ರಮಾಣದಲ್ಲಿ ನೀರು ಶೇಖರಣೆಯಾಗಿದೆ. ಬೇಸಿಗೆಯಲ್ಲೂ ಸಹ ರಸ್ತೆ ಬದಿ ನೆಡಲಾಗಿದ್ದ ಗಿಡಗಳಿಗೆ ಟ್ಯಾಂಕರ್ ಮೂಲಕ ನೀರು ಹಾಯಿಸಲಾಗಿದೆ ಎಂದರು.

ಹಾಕುವ ಕೆಲಸವನ್ನು ಶಿರಹಟ್ಟಿಯ ಸಾಮಾಜಿಕ ಅರಣ್ಯ ಇಲಾಖೆ ಅಧಿಕಾರಿಗಳು ಮಾಡಿದ್ದಾರೆ.

ಟ್ರೆಂಚ್‌ಗಳು ನಿರ್ಮಾಣವಾದ ನಂತರ ಅವುಗಳಲ್ಲಿ ಹೆಚ್ಚಿನ ಪ್ರಮಾಣದಲ್ಲಿ ನೀರು ಸಂಗ್ರಹವಾದ ಬಳಿಕ ಅವುಗಳನ್ನು ಸಮರ್ಪಕ ನಿರ್ವಹಣೆಯನ್ನು ಸಹ ಇಲಾಖೆಯ ಅಧಿಕಾರಿಗಳು ನಿಭಾಯಿಸಬೇಕು. ಅಂದಾಗ ಮಾತ್ರ ಸರಕಾರದ ಉದ್ದೇಶ ನೀರು ಮತ್ತು ಮಣ್ಣು ಸಂರಕ್ಷಣೆಯಾಗಲಿದೆ. ಈ ನಿಟ್ಟಿನಲ್ಲಿ ಇವುಗಳ ನಿರ್ವಹಣೆಯೂ ಸಹ ಅಷ್ಟೇ ಮುಖ್ಯವಾಗಿದೆ.

ಚುನಾವಣಾ ಬಹಿಷ್ಕಾರಕ್ಕೆ ಸಮಾಲೋಚನೆ

■ ವಿಜಯಸಾಕ್ಷಿ ಸುದ್ದಿ, ಕೊಪ್ಪಳ

ಈಶಾನ್ಯ ಪದವೀಧರ ಕ್ಷೇತ್ರದಿಂದ ಸ್ಪರ್ಧಿಸಿ ಚುನಾಯಿತರಾದವರು ಈವರೆಗೂ ಪರಿಷತ್‌ನಲ್ಲಿ ಅತಿಥಿ ಉಪನ್ಯಾಸಕರ ಪರ ಧ್ವನಿ ಎತ್ತಿಲ್ಲ ಎಂಬ ಆಕ್ರೋಶ ಜಿಲ್ಲೆಯ ಅತಿಥಿ ಉಪನ್ಯಾಸಕರಿಂದ ವ್ಯಕ್ತವಾಗಿದೆ. ಈ ಸಲ ನಡೆಯಲಿರುವ ಪದವೀಧರ ಕ್ಷೇತ್ರದ ಚುನಾವಣೆಗೆ ಮತದಾನ ಬಹಿಷ್ಕಾರ ಮಾಡಲು ಸಮಾಲೋಚನೆ ನಡೆಸಲಾಗುತ್ತಿದೆ ಎಂದು ಮುಖಂಡರು ತಿಳಿಸಿದ್ದಾರೆ.

ಈ ಕುರಿತು ಪ್ರಕಟಣೆ ನೀಡಿರುವ ಅತಿಥಿ ಉಪನ್ಯಾಸಕರ ಮುಖಂಡರಾದ ಡಾ. ತುಕಾರಾಂ ನಾಯಕ ಹಾಗೂ ಬಸವರಾಜ ಕರುಗಲ್, ಸರಕಾರಿ ಪದವಿ ಕಾಲೇಜುಗಳಲ್ಲಿ ಹಲವು ವರ್ಷಗಳಿಂದ ಸೇವೆ ಸಲ್ಲಿಸುತ್ತಿರುವ ಅತಿಥಿ ಉಪನ್ಯಾಸಕರಿಗೆ ಸೇವಾ ಭದ್ರತೆ ಸಿಕ್ಕಿಲ್ಲ. ಈ ಕುರಿತು ಹಲವು ಬಾರಿ ಎಲ್ಲ ಪಕ್ಷಗಳ ಜನಪ್ರತಿನಿಧಿಗಳಿಗೆ ಬೇಡಿಕೆ ಸಲ್ಲಿಸಿದರೂ ಪ್ರಯೋಜನವಾಗಿಲ್ಲ. ಅದರಲ್ಲೂ ಈಶಾನ್ಯ ಪದವೀಧರ ಕ್ಷೇತ್ರ ಪ್ರತಿನಿಧಿಸಿ ಆಯ್ಕೆಯಾದವರು ಸ್ವತಃ ಶಿಕ್ಷಣ ಸಂಸ್ಥೆಗಳನ್ನು ಹೊಂದಿದ್ದು, ಅತಿಥಿ ಉಪನ್ಯಾಸಕರ ವಿರೋಧಿ ನೀತಿ ಅನುಸರಿಸುತ್ತಿದ್ದಾರೆ ಎಂಬ ವಿಚಾರ ಇದೀಗ ಮುನ್ನೆಲೆಗೆ ಬಂದಿದೆ ಎಂದು ಅವರು ವಿವರಿಸಿದ್ದಾರೆ.

ಮತದಾನ ಪ್ರಕ್ರಿಯೆಯೊಳಗೆ ಜಿಲ್ಲೆಯ ಎಲ್ಲ ಅತಿಥಿ ಉಪನ್ಯಾಸಕರು ಮತದಾನ ಬಹಿಷ್ಕಾರಕ್ಕೆ ಸಮಾಲೋಚನೆ ಮಾಡುವುದಾಗಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಅತಿಥಿ ಉಪನ್ಯಾಸಕರ ಮತದಾನ ಬಹಿಷ್ಕಾರದ ನಡೆ ಕಣದಲ್ಲಿರುವ ಅಭ್ಯರ್ಥಿಗಳಿಗೆ ಬಿಸಿತುಪ್ಪವಾಗಿ ಪರಿಣಮಿಸಿದೆ.

ಶಿಕ್ಷಕಿ ಅನ್ನಪೂರ್ಣ ಕುರ್ತಕೋಟಿ ಸೇವಾ ನಿವೃತ್ತಿ ಇಂದು

■ ವಿಜಯಸಾಕ್ಷಿ ಸುದ್ದಿ, ಗದಗ

ಶಿರಹಟ್ಟಿ ತಾಲೂಕಿನ ಮಹಾಲಿಂಗಪೂರ ತಾಂಡಾದಲ್ಲಿ ಶಿಕ್ಷಕ ವೃತ್ತಿಯನ್ನು ಪ್ರಾರಂಭಿಸಿದ ಅನ್ನಪೂರ್ಣ ಕುರ್ತಕೋಟಿ ಅಲ್ಲಿಂದ ನಾಗಸಮುದ್ರ, ಹರ್ತಿ ಹಾಗೂ ಡಂಬಳ ಎಜಿಬಿ ಶಾಲೆಯಲ್ಲಿ, ಕೊನೆಯಲ್ಲಿ ಪಾಪನಾಶಿ ಶಾಲೆಯಲ್ಲಿ ಸೇವೆ ಸಲ್ಲಿಸಿ ಮೇ 31ರಂದು ಸೇವಾ ನಿವೃತ್ತಿ ಹೊಂದಲಿದ್ದಾರೆ.

ಇವರ ಶಿಕ್ಷಣ ಸೇವೆ ಮೆಚ್ಚಿ ಕರ್ನಾಟಕ ರಕ್ಷಣಾ ವೇದಿಕೆಯಿಂದ ಜಿಲ್ಲಾಮಟ್ಟದ ಉತ್ತಮ ಶಿಕ್ಷಕಿ ಎಂದು ಪ್ರಶಸ್ತಿಯನ್ನು ಪಡೆದಿದ್ದಾರೆ. ಇವರು ಎಲ್ಲರ ಅಚ್ಚು ಮೆಚ್ಚಿನ ಶಿಕ್ಷಕರಾಗಿ ಸೇವೆ ಸಲ್ಲಿಸಿದರಲ್ಲದೆ, ಸಾಕ್ಷರತಾ ಶಾಲೆಯಲ್ಲಿಯೂ ಕೂಡ ತೊಡಗಿಸಿಕೊಂಡಿದ್ದರು. ಒಟ್ಟು 30 ವರ್ಷದ ಸೇವೆಯಲ್ಲಿ ಯಾವುದೇ ಕಪ್ಪು ಚುಕ್ಕೆ ಇಲ್ಲದೆ ಪ್ರಾಮಾಣಿಕವಾಗಿ ಸೇವೆ ಮಾಡಿ, ಗುಣಾತ್ಮಕ ಶಿಕ್ಷಣವನ್ನು ಮಕ್ಕಳಿಗೆ ಬೋಧಿಸಿ ಸರಕಾರಿ ಸೇವೆಯನ್ನು ದೇವರ ಸೇವೆಯಂದು ತಿಳಿದುಕೊಂಡು ಕರ್ತವ್ಯ ನಿರ್ವಹಿಸಿ ನಿವೃತ್ತಿ ಹೊಂದುತ್ತಿದ್ದು, ಅವರ ನಿವೃತ್ತ ಜೀವನ ಸುಖಕರವಾಗಿರಲೆಂದು ಸಹೋದ್ಯೋಗಿಗಳು, ವಿದ್ಯಾರ್ಥಿಗಳು ಹಾಗೂ ಅಭಿಮಾನಿಗಳು ಹಾರೈಸಿದ್ದಾರೆ.

ಸಾಧಕ ವಿದ್ಯಾರ್ಥಿಗಳಿಗೆ ಸನ್ಮಾನ

■ ವಿಜಯಸಾಕ್ಷಿ ಸುದ್ದಿ, ಮುಳಗುಂದ

ಮುಳಗುಂದ ಪಟ್ಟಣದ ಖಿದ್ಮತ್-ಎ-ಮಿಲ್ಲತ್ ಗ್ರೂಪ್ ವತಿಯಿಂದ ಎಸ್‌ಎಸ್‌ಎಲ್‌ಸಿ ಹಾಗೂ ಪಿಯುಸಿಯಲ್ಲಿ ಉತ್ತಮ ಅಂಕ ಗಳಿಸಿದ ವಿದ್ಯಾರ್ಥಿಗಳನ್ನು ಸನ್ಮಾನಿಸಲಾಯಿತು.

2023-24ನೇ ಸಾಲಿನಲ್ಲಿ ಮುಳಗುಂದದ ಅಂಜುಮನ್-ಎ-ಇಸ್ಲಾಂ ಸರಕಾರಿ ಪ್ರೌಢಶಾಲೆಯು ಎಸ್‌ಎಸ್‌ಎಲ್‌ಸಿಯಲ್ಲಿ ಶೇ 76.47 ಹಾಗೂ ಪದವಿಪೂರ್ವ ಕಾಲೇಜಿನ ಕಾಮರ್ಸ್ ವಿಭಾಗದಲ್ಲಿ ಶೇ 96, ಕಲಾ ವಿಭಾಗದಲ್ಲಿ ಶೇ 68ರಷ್ಟು ಸಾಧನೆ ಮಾಡಿದೆ.

ಸಾಧಕ ವಿದ್ಯಾರ್ಥಿಗಳನ್ನು ಸನ್ಮಾನಿಸಿ ಮಾತನಾಡಿದ

ತಾಜುದ್ದೀನ ಕಿನ್ರಿ ಪರೀಕ್ಷೆಯಲ್ಲಿ ಉತ್ತಮ ಅಂಕ ಪಡೆದಿರುವ ಎಲ್ಲ ವಿದ್ಯಾರ್ಥಿಗಳಿಗೂ ಅಭಿನಂದಿಸಿ, ಮುಂದಿನ ಶಿಕ್ಷಣವನ್ನು ಚೆನ್ನಾಗಿ ಕಲಿತು, ಕಲಿತ ಶಾಲೆಗೆ ಹಾಗೂ ತಂದೆ-ತಾಯಿಗಳಿಗೆ ಕೀರ್ತಿ ತರಬೇಕು ಎಂದರು.

ಕಾರ್ಯಕ್ರಮದಲ್ಲಿ ಅಬ್ದುಲ್ ಹಮೀದ ಮುಜಾವರ, ಸೈಯದಲಿ ಶೇಖ, ಅಜರುದ್ದೀನ ಲಾಡಸಾಬನವರ, ರಫೀಕ ಅಹ್ಮದ ದಲೀಲ, ಚಮನಸಾಬ ಹಾದಿಮನಿ, ಹೈದರಲಿ ಖವಾಸ, ಮುನ್ನಾ ಢಾಲಾಯತ, ಮಾಬುಲಿ ದುರ್ಗಿಗುಡಿ, ಹುಸೇನ ಅಕ್ಕಿ, ದಾವೂದ ಜಮಾಲ್, ಪ್ರಾಚಾರ್ಯ ಜಿ.ಎಸ್. ಶಿರ್ಶಿ, ಪ್ರದಾನ ಗುರುಗಳಾದ ಎಸ್.ಎಂ. ಉಮರ್ಜಿ, ಗ್ರೂಪ್‌ನ ಸರ್ವ ಸದಸ್ಯರು, ಎಸ್‌ಡಿಎಂಸಿ ಪದಾಧಿಕಾರಿಗಳು, ಶಾಲಾ-ಕಾಲೇಜಿನ ಶಿಕ್ಷಕರು, ಉಪನ್ಯಾಸಕರು ಹಾಗೂ ಸಿಬ್ಬಂದಿ ವರ್ಗದವರು ಹಾಜರಿದ್ದರು.

ಮತ ಎಣಿಕೆ ನಿಮಿತ್ತ ಮದ್ಯ ಮಾರಾಟ ನಿಷೇಧ

■ ವಿಜಯಸಾಕ್ಷಿ ಸುದ್ದಿ, ಧಾರವಾಡ

ಜೂನ್ 4ರಂದು ಮತ ಎಣಿಕೆ ಕಾರ್ಯ ಮುಕ್ತವಾಗಿ ಮತ್ತು ಶಾಂತಿಯುತವಾಗಿ ಜರುಗುವ ಹಿನ್ನೆಲೆಯಲ್ಲಿ ಶಾಂತಿ, ಸುವ್ಯವಸ್ಥೆ ಕಾಪಾಡುವ ಹಿತದೃಷ್ಟಿಯಿಂದ ಜೂನ್ 3ರ ಮಧ್ಯರಾತ್ರಿಯಿಂದ ಜೂನ್ 4ರ ಮಧ್ಯರಾತ್ರಿವರೆಗೆ ಜಿಲ್ಲೆಯಾದ್ಯಂತ ಮದ್ಯಪಾನ, ಮದ್ಯ ಮಾರಾಟ, ಮದ್ಯ ಸಾಗಾಣಿಕೆ ಮತ್ತು ಮದ್ಯ ಸಂಗ್ರಹಣೆಯನ್ನು ನಿಷೇಧಿಸಿ, ಶುಷ್ಕ ದಿವಸಗಳೆಂದು ಘೋಷಿಸಿ, ಜಿಲ್ಲಾಧಿಕಾರಿ ದಿವ್ಯ ಪ್ರಭು ಆದೇಶಿಸಿದ್ದಾರೆ.

ಧಾರವಾಡ ಜಿಲ್ಲೆಯ ಎಲ್ಲ ವಿಧಾನಸಭಾ ಮತ ಕ್ಷೇತ್ರಗಳ ವ್ಯಾಪ್ತಿಯಲ್ಲಿ ಆದೇಶ ಜಾರಿಗೊಳಿಸಲು ಜಿಲ್ಲಾಧಿಕಾರಿಗಳು ನಿರ್ದೇಶಿಸಿದ್ದಾರೆ.

ಆದೇಶ ಜಾರಿ ಸಮಯದಲ್ಲಿ ಯಾವತ್ತೂ ಭಾರತೀಯ ತಯಾರಿಕೆಯ ಮದ್ಯದ ಅಂಗಡಿಗಳು, ಬಿಯರ್ ಬಾರ್‌ಗಳು, ಕ್ಲಬ್‌ಗಳು, ಮತ್ತು ಮದ್ಯದ ಡಿಪೋಗಳನ್ನು ಮುಚ್ಚತಕ್ಕದ್ದು. ಇದಲ್ಲದೇ ಪರಿಸ್ಥಿತಿಗೆ ಅನುಗುಣವಾಗಿ ಸಾರ್ವಜನಿಕ ಶಾಂತತೆಯನ್ನು ಕಾಯ್ದುಕೊಳ್ಳುವ ಹಿತದೃಷ್ಟಿಯಿಂದ ವಲಯ ಅಬಕಾರಿ ಇನಸ್ಪೆಕ್ಟರ್‌ರು, ಉಪವಿಭಾಗದ ಅಬಕಾರಿ ಅಧೀಕ್ಷಕರು ಅವಶ್ಯಕತೆ ಕಂಡುಬಂದಲ್ಲಿ ಶಾಂತಿ ಪಾಲನೆಗೆ ಸೂಕ್ತ ಕ್ರಮ ಕೈಗೊಳ್ಳಲು ಮತ್ತು ಆದೇಶವನ್ನು ಪರಿಣಾಮಕಾರಿಯಾಗಿ ಜಾರಿಗೊಳಿಸಲು ಅವರು ಆದೇಶದಲ್ಲಿ ತಿಳಿಸಿದ್ದಾರೆ.

ಸಾರ್ವಜನಿಕ ಭಾಷಣದ ಘನತೆ ಕುಗ್ಗಿಸಿದ ಮೊದಲ ಪ್ರಧಾನಿ ನರೇಂದ್ರ ಮೋದಿ: ಮನಮೋಹನ್ ಸಿಂಗ್

■ ವಿಜಯಸಾಕ್ಷಿ ಸುದ್ದಿ, ನವದೆಹಲಿ



ಪ್ರಧಾನಿ ನರೇಂದ್ರ ಮೋದಿಯವರ ವಿರುದ್ಧ ತೀವ್ರ ವಾಗ್ದಾಳಿ ನಡೆಸಿದ ಮಾಜಿ ಪ್ರಧಾನಿ ಮನಮೋಹನ್ ಸಿಂಗ್, "ಚುನಾವಣಾ ಪ್ರಚಾರದ ಸಮಯದಲ್ಲಿ 'ದ್ವೇಷಪೂರಿತ ಭಾಷಣ' ನೀಡುವ ಮೂಲಕ ಸಾರ್ವಜನಿಕ ಭಾಷಣದ ಘನತೆ ಮತ್ತು ಪ್ರಧಾನಿ ಕಚೇರಿಯ ಘನತೆಯನ್ನು ಕಡಿಮೆ ಮಾಡಿದ್ದಾರೆ" ಎಂದು ಆರೋಪಿಸಿದ್ದಾರೆ.

ಜೂನ್ 1 ರಂದು ನಡೆಯಲಿರುವ ಏಳನೇ ಹಂತದ ಲೋಕಸಭೆ ಚುನಾವಣೆಗೆ ಮುನ್ನ ಪಂಜಾಬ್‌ನ ಮತದಾರರಿಗೆ ಮಾಡಿದ ಮನವಿಯಲ್ಲಿ, ಪ್ರಜಾಪ್ರಭುತ್ವ ಮತ್ತು ಸಂವಿಧಾನವನ್ನು ಸಂರಕ್ಷಿಸುವ ಬೆಳವಣಿಗೆ-ಆಧಾರಿತ ಪ್ರಗತಿಪರ ಭವಿಷ್ಯವನ್ನು ಕಾಂಗ್ರೆಸ್ ಮಾತ್ರ ಖಚಿತಪಡಿಸುತ್ತದೆ ಎಂದು ಸಿಂಗ್ ಪ್ರತಿಪಾದಿಸಿದರು.

ಸಶಸ್ತ್ರ ಪಡೆಗಳ ಮೇಲೆ "ದುರ್ಕಲ್ಪನೆ" ಅಗ್ನಿವೀರ್ ಯೋಜನೆಯನ್ನು ಹೇರಿದ್ದಕ್ಕಾಗಿ ಬಿಜೆಪಿ ಸರ್ಕಾರವನ್ನು ಹಿರಿಯ ಕಾಂಗ್ರೆಸ್ ನಾಯಕರು ಟೀಕಿಸಿದರು.

"ದೇಶಭಕ್ತಿ, ಶೌರ್ಯ ಮತ್ತು ಸೇವೆಯ ಮೌಲ್ಯ ಕೇವಲ ನಾಲ್ಕು ವರ್ಷಗಳು ಎಂದು ಬಿಜೆಪಿ ಭಾವಿಸುತ್ತದೆ. ಇದು ಅವರ ನಕಲಿ ರಾಷ್ಟ್ರೀಯತೆಯನ್ನು ತೋರಿಸುತ್ತದೆ" ಎಂದು ಅವರು ಪಂಜಾಬ್ ಮತದಾರರಿಗೆ ಬರೆದ ಪತ್ರದಲ್ಲಿ ತಿಳಿಸಿದ್ದಾರೆ.

ಮೋದಿ ವಿರುದ್ಧ ವಾಗ್ದಾಳಿ ನಡೆಸಿದ ಸಿಂಗ್, "ಈ ಚುನಾವಣಾ ಪ್ರಚಾರದ ಸಮಯದಲ್ಲಿ ನಾನು ರಾಜಕೀಯ ಭಾಷಣವನ್ನು ತೀವ್ರವಾಗಿ ಅನುಸರಿಸುತ್ತಿದ್ದೇನೆ. ಮೋದಿ ಅವರು ದ್ವೇಷದ ಭಾಷಣಗಳ ಅತ್ಯಂತ ಕೆಟ್ಟ ರೂಪದಲ್ಲಿ ತೊಡಗಿಸಿಕೊಂಡಿದ್ದಾರೆ.

ಪದವೀಧರ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಅಮರನಾಥ ಪಾಟೀಲ್ ಪರ ಅರುಣ್ ಶಾಹಪುರ ಮತಯಾಚನೆ

ಶಿಕ್ಷಣ ಇಲಾಖೆಗೆ ಪರೀಕ್ಷೆಯ ಬಗ್ಗೆ ಸ್ಪಷ್ಟತೆಯಿಲ್ಲ

■ ವಿಜಯಸಾಕ್ಷಿ ಸುದ್ದಿ, ಹರಪನಹಳ್ಳಿ

ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದ ಮೇಲೆ ಶಿಕ್ಷಣದ ವ್ಯವಸ್ಥೆಯನ್ನು ಹಾಳುಗೆಡವಿದೆ ಎಂದು ವಿಧಾನ ಪರಿಷತ್ ಮಾಜಿ ಸದಸ್ಯ ಅರುಣ್ ಶಾಹಪುರ ಆರೋಪಿಸಿದರು.

ಪಟ್ಟಣದ ಎಡಿಬಿ ಕಾಲೇಜಿನಲ್ಲಿ ಈಶಾನ್ಯ ಪದವೀಧರ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಅಮರನಾಥ ಪಾಟೀಲ್ ಪರವಾಗಿ ಮತಯಾಚನೆ ಮಾಡಿ ಸುದ್ದಿಗಾರರೊಂದಿಗೆ ಮಾತನಾಡಿದರು.

ರಾಜ್ಯದಲ್ಲಿ ಎಸ್‌ಎಸ್‌ಎಲ್‌ಸಿ ಪರೀಕ್ಷೆಯ ವ್ಯವಸ್ಥೆ ಹೀನಾಯ ಹಂತಕ್ಕೆ ತಲುಪಿದೆ. ಶಿಕ್ಷಣ ಇಲಾಖೆಗೆ ಪರೀಕ್ಷೆಯ ಬಗ್ಗೆ ಸ್ಪಷ್ಟ ಪರಿಕಲ್ಪನೆ ಇಲ್ಲ. ವಿದ್ಯಾರ್ಥಿಗಳು ಮತ್ತು ಪಾಲಕರನ್ನು ಅನಗತ್ಯವಾಗಿ ಗೊಂದಲಕ್ಕೆ ತಳ್ಳಿದೆ ಎಂದು ಸರ್ಕಾರದ ವಿರುದ್ಧ ಆಕ್ರೋಶ

ವ್ಯಕ್ತಪಡಿಸಿದರು.

10ನೇ ತರಗತಿ ಮತ್ತು ದ್ವಿತೀಯ ಪಿಯುಸಿಗೆ ತಲಾ ಮೂರು ಪರೀಕ್ಷೆಗಳನ್ನು ನಡೆಸುತ್ತದೆ. ಇದರಿಂದ ವಿದ್ಯಾರ್ಥಿಗಳು, ಶಿಕ್ಷಕರು, ಪಾಲಕರು ತೀವ್ರ ಒತ್ತಡಕ್ಕೆ ಸಿಲುಲುಕಿದ್ದು, ಮೂರು ಪರೀಕ್ಷೆಗಳಿಗೂ ವಿದ್ಯಾರ್ಥಿಗಳಿಂದ ಪರೀಕ್ಷಾ ಶುಲ್ಕ ವಸೂಲಿ ಮಾಡಿದ್ದಾರೆ. ವಿದ್ಯಾರ್ಥಿಗಳಿಗೆ ಕ್ರಪಾಂಕ (ಗ್ರೇಸ್ ಮಾರ್ಕ್ಸ್) ನೀಡುವ ಮೂಲಕ ರಾಜಕೀಯ ಹಸ್ತಕ್ಷೇಪ ಮಾಡಿದ್ದಾರೆ ಎಂದು ದೂರಿದರು.

ಹಿಂದಿನ ಬಿಜೆಪಿ ಸರ್ಕಾರ ಶಿಕ್ಷಣದ ವ್ಯವಸ್ಥೆ ಸುಧಾರಣೆಗೆ ಸಾಕಷ್ಟು ಕ್ರಮಗಳನ್ನು ಕೈಗೊಂಡಿತ್ತು. ಆದರೆ ಕಾಂಗ್ರೆಸ್ ಅಧಿಕಾರಕ್ಕೆ ಬಂದು ಒಂದು ವರ್ಷ ಕಳೆದರೂ ಒಂದೇ ಒಂದು ಶಾಲಾ ಕೊಠಡಿ ಭೂಮಿ ಪೂಜೆ ನಡೆದಿಲ್ಲ, ಶಿಕ್ಷಕರ ನೇಮಕವಿಲ್ಲ, ಸರ್ಕಾರ ಶಿಕ್ಷಣದ ವ್ಯವಸ್ಥೆಯನ್ನು ದುರಾಡಳಿತಕ್ಕೆ ತಳ್ಳಿದೆ ಎಂದು ವಾಗ್ದಾಳಿ ನಡೆಸಿ, ಪದವೀಧರರ ಎಲ್ಲಾ ಸಮಸ್ಯೆಗಳ ಪರಿಹಾರಕ್ಕೆ ಬಿಜೆಪಿ ಅಭ್ಯರ್ಥಿ ಅಮರನಾಥ ಪಾಟೀಲರಿಗೆ ಮತ ನೀಡಿ ಎಂದು ಮನವಿ ಮಾಡಿಕೊಂಡರು.

ವಿಜಯನಗರ ಜಿಲ್ಲಾಧ್ಯಕ್ಷ ಚನ್ನಬಸವನಗೌಡ ಪಾಟೀಲ್, ಎಂ.ಪಿ. ನಾಯ್ಕ, ಆರುಂಡಿ ನಾಗರಾಜ, ಕಣಿವಿಹಳ್ಳಿ ಮಂಜುನಾಥ, ಮುದುಕವ್ವನವರ ಶಂಕರ, ಎಲ್. ಮಂಜ್ಯಾನಾಯ್ಕ, ಬಿ.ವೈ. ವೆಂಕಟೇಶ ನಾಯ್ಕ, ಓಂಕಾರ ಗೌಡ, ಚನ್ನನಗೌಡ, ಲಿಂಗಾನಂದ, ಕುಸುಮ ಜಗದೀಶ್, ಸಪ್ನ ಮಲ್ಲಿಕಾರ್ಜುನ, ರಮೇಶ ಎಂ. ಚಂದ್ರಶೇಖರ ಮುಂತಾದವರಿದ್ದರು.

ಚುನಾವಣೆ ಫಲಿತಾಂಶ ಪ್ರಕಟವಾದ 48 ಗಂಟೆಗಳಲ್ಲಿ ಇಂಡಿಯಾ ಮೈತ್ರಿಕೂಟದ ಪ್ರಧಾನಿ ಅಭ್ಯರ್ಥಿ ಘೋಷಣೆ

■ ವಿಜಯಸಾಕ್ಷಿ ಸುದ್ದಿ, ನವದೆಹಲಿ



ಇಂಡಿಯಾ ಮೈತ್ರಿಕೂಟವು ಲೋಕಸಭೆ ಚುನಾವಣೆಯಲ್ಲಿ ನಿರ್ಣಾಯಕ ಜನಾದೇಶ ಪಡೆಯಲಿದೆ ಮತ್ತು ಲೋಕಸಭೆ ಚುನಾವಣೆ ಫಲಿತಾಂಶ ಪ್ರಕಟವಾದ 48 ಗಂಟೆಗಳಲ್ಲಿ ಇಂಡಿಯಾ ಮೈತ್ರಿಕೂಟದ ಪ್ರಧಾನಿ ಅಭ್ಯರ್ಥಿಯನ

ಕಳಪೆ ಕಾಮಗಾರಿಯಿಂದ ನಿತ್ಯ ಸಾವು-ನೋವು

■ ವಿಜಯಸಾಕ್ಷಿ ಸುದ್ದಿ, ಮುಳಗುಂದ

ಪಟ್ಟಣದ ಬಸ್ ನಿಲ್ದಾಣದಿಂದ ಅಬ್ಬಿಗೇರಿ ಕೆರೆಯ ಮಾರ್ಗದಿಂದ ಚಿಂಚಲಿ ಕ್ರಾಸ್‌ವರೆಗೆ ನಿರ್ಮಾಣವಾದ ಸಿಸಿ ರಸ್ತೆ ಕಾಮಗಾರಿ ಸಂಪೂರ್ಣ ಕಳಪೆಯಾಗಿದ್ದು, ರಸ್ತೆಯ ಮಧ್ಯ ಭಾಗದಲ್ಲಿ ಬಿರುಕು ಬಿಟ್ಟು ಬೈಕ್ ಸವಾರರು ನಿತ್ಯ ಪರದಾಡುತ್ತಿದ್ದು, ಕೂಡಲೇ ಈ ಬಗ್ಗೆ ಸಂಬಂಧಪಟ್ಟ ಅಧಿಕಾರಿಗಳು ಗಮನಹರಿಸಬೇಕು ಎಂದು ಸಾರ್ವಜನಿಕರು ಆಗ್ರಹ ವ್ಯಕ್ತಪಡಿಸಿದ್ದಾರೆ.

ಬುಧವಾರ ಸಂಜೆ ಸಂತೆಗೆ ಪತಿಯ ಜೊತೆಗೆ ಬೈಕ್‌ನಲ್ಲಿ ತೆರಳುತ್ತಿರುವ ಸಂದರ್ಭದಲ್ಲಿ ಸಿಸಿ ರಸ್ತೆ ಬಿರುಕಿನಲ್ಲಿ ಬೈಕ್ ಗಾಲಿ ಸಿಕ್ಕಿಕೊಂಡು ಬೈಕ್ ಆಯ ತಪ್ಪಿದ ಪರಿಣಾಮದಿಂದ ರೇಣುಕಾ ಚಂದ್ರಶೇಖರ ಹಣಗಿ ಎಂಬುವವರು ಸಾವಿಗೀಡಾಗಿದ್ದರು. ಇನ್ನೂ ಅನೇಕ ಸವಾರರು ಇದೇ ರೀತಿ ಬಿದ್ದು ಗಾಯಗೊಂಡಿದ್ದಾರೆ. ನಿತ್ಯ ಸಾವು-ನೋವುಗಳಾಗುತ್ತಿದ್ದರೂ ಯಾವ ಅಧಿಕಾರಿಗಳೂ ಶಾಶ್ವತವಾಗಿ ಸಿಸಿ ರಸ್ತೆ ಬಿರುಕು ಮುಚ್ಚುವ ಕೆಲಸಕ್ಕೆ ಮುಂದಾಗದೇ ಇರುವುದಕ್ಕೆ ಸಾರ್ವಜನಿಕರು ಹಿಡಿ ಶಾಪ ಹಾಕುತ್ತಿದ್ದಾರೆ.

ವಿನಾಯಿತಿ ದರದಲ್ಲಿ ಬಿತ್ತನೆ ಬೀಜ ಪೂರೈಸಿ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಬರಗಾಲದಿಂದ ಆರ್ಥಿಕ ಸಂಕಷ್ಟದಲ್ಲಿರುವ ರೈತರಿಗೆ ಬಿತ್ತನೆ ಬೀಜಗಳ ದರ ಏರಿಕೆ ಮಾಡಿರುವ ರೈತ ವಿರೋಧಿ ರಾಜ್ಯ ಸರ್ಕಾರದ ನಡೆಯನ್ನು ಶಿರಹಟ್ಟಿ ಮಂಡಲ ಬಿಜೆಪಿ ಸಹಕಾರ ಪ್ರಕೋಷ್ಠದ ಸಂಚಾಲಕ ಸೋಮೇಶ ಉಪನಾಳ ಖಂಡಿಸಿದ್ದಾರೆ.

ಅವರು ಪತ್ರಿಕಾ ಪ್ರಕಟಣೆ ನೀಡಿ, ಕಳೆದ ವರ್ಷಕ್ಕೆ ಹೋಲಿಸಿದರೆ ಈ ಬಾರೀ ಕನಿಷ್ಠ ಒಂದೂವರೆ ಪಟ್ಟು ಬಿತ್ತನೆ ಬೀಜಗಳ ಬೆಲೆಯನ್ನು ಹೆಚ್ಚಿಸಿರುವುದು ಕಾಂಗ್ರೆಸ್ ಸರ್ಕಾರದ ಮತ್ತೊಂದು ಗ್ಯಾರಂಟಿ. ಸತತ ಮೂರು ವರ್ಷಗಳಿಂದ ಅಕಾಲಿಕ ಮಳೆ, ಪ್ರವಾಹ, ಭೀಕರ ಬರದಿಂದ ರೈತ ತತ್ತರಿಸಿ ಹೋಗಿದ್ದಾನೆ. ಇಂತಹ ಸಂದರ್ಭದಲ್ಲಿ ಗಾಯದ ಮೇಲೆ ಬರೆ ಎಂಬಂತೆ ಬೀಜಗಳ ದರಗಳನ್ನು ಹೆಚ್ಚಿಸಿರುವುದು ನಿಜಕ್ಕೂ ಖೇದಕರ ಸಂಗತಿ.

ಸರ್ಕಾರ ನಿಗದಿಪಡಿಸಿದ ಈಗಿನ ದರದಲ್ಲಿ ಕನಿಷ್ಠ ಶೇ 50ರಷ್ಟು ರಿಯಾಯತಿ ಅಥವಾ ವಿನಾಯಿತಿಯನ್ನು ನೀಡಿ ಬೀಜಗಳನ್ನು ಪೂರೈಸುವುದರಿಂದ ರೈತ ಕೊಂಡುಕೊಳ್ಳಲು ಸಹಾಯವಾಗುತ್ತದೆ. ಅಲ್ಲದೆ, ಕೇಂದ್ರ ಸರ್ಕಾರ/ರಾಜ್ಯ ಸರ್ಕಾರಗಳು ನೀಡುವ ಬೆಳೆವಿಮೆ/ಬೆಳೆಹಾನಿ/ಪ್ರೋತ್ಸಾಹ ಧನಗಳನ್ನು ಬ್ಯಾಂಕಿನವರು ರೈತರ ಖಾತೆಗೆ ಜಮಾ ಮಾಡುವುದು ಅಲ್ಲಲ್ಲಿ ಕಂಡುಬಂದಿದ್ದು, ಅದನ್ನು ಕೂಡಲೇ ತಡೆಯಿರಿ. ಕೂಡಲೇ ಸಂಬಂಧಪಟ್ಟ ಇಲಾಖಾಧಿಕಾರಿಗಳಿಗೆ ಶೀಘ್ರವಾಗಿ ನಿರ್ದೇಶವನ್ನು ನೀಡಬೇಕೆಂದು ಅವರು ಆಗ್ರಹಿಸಿದ್ದಾರೆ.

ಬದುಕಿಗೆ ಬೆಳಕು ಕೊಡುವ ಶಕ್ತಿ ಧರ್ಮಕ್ಕಿದೆ

■ ವಿಜಯಸಾಕ್ಷಿ ಸುದ್ದಿ, ಶಿವಮೊಗ್ಗ

ಮನುಷ್ಯನ ಉಜ್ವಲ ಭವಿಷ್ಯಕ್ಕೆ ಧರ್ಮಾಚರಣೆಯ ಅಗತ್ಯವಿದೆ. ಆಡುವ ಮಾತು ಧರ್ಮವಲ್ಲ. ಆಡಿದಂತೆ ನಡೆಯುವುದೇ ನಿಜವಾದ ಧರ್ಮ. ಬದುಕಿಗೆ ಬೆಳಕು ಕೊಡುವ ಶಕ್ತಿ ಧರ್ಮಕ್ಕೆ ಇದೆ ಹೊರತು ಬೇರೆ ಯಾವುದಕ್ಕೂ ಇಲ್ಲವೆಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಅವರು ಗುರುವಾರ ತಾಲೂಕಿನ ಬೀರನಹಳ್ಳಿ ಗ್ರಾಮದಲ್ಲಿ ಜರುಗಿದ ಇಷ್ಟಲಿಂಗ ಪೂಜೆ ಹಾಗೂ ಧರ್ಮ ಜಾಗೃತಿ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.

ವೀರಶೈವ ಧರ್ಮ ಅತ್ಯಂತ ಪ್ರಾಚೀನ ಧರ್ಮವಾಗಿದ್ದು, ಇದಕ್ಕೊಂದು ಭವ್ಯ ಪರಂಪರೆ, ಇತಿಹಾಸ ಇದೆ. ಪರಶಿವನ ಆದೇಶದಂತೆ ಶ್ರೀ ಜಗದ್ಗುರು ರೇಣುಕಾದಿ ಪಂಚಾಚಾರ್ಯರು ಕೊಲ್ಲಿಪಾಕಿ ಸೋಮೇಶ್ವರಾದಿ ಪಂಚ ಶಿವಲಿಂಗಗಳಿಂದ ಅವತರಿಸಿ ಭೂಮಂಡಲದಲ್ಲಿ ವೀರಶೈವ ಧರ್ಮವನ್ನು ಸ್ಥಾಪಿಸಿದರು. ಸಕಲ ಜೀವಾತ್ಮರಿಗೆ ಸದಾ ಒಳಿತನ್ನೇ ಬಯಸಿದ ವೀರಶೈವ ಧರ್ಮ ಆಯಾ ಕಾಲಘಟ್ಟಗಳಲ್ಲಿ ಬೆಳೆದುಕೊಂಡು ಬಂದಿದೆ. ಎಷ್ಟೋ ಜನರು ಧರ್ಮವನ್ನು ಜಾತಿಗೆ ಜೋಡಿಸಿ ಧರ್ಮದ ವಿಶಾಲ ತತ್ವಕ್ಕೆ ಅಪಚಾರ ಮಾಡುತ್ತಿದ್ದಾರೆ. ಜಾತಿ ಎಂದೂ ಧರ್ಮವಾಗಲಾರದು. ಧರ್ಮದಲ್ಲಿರುವ ದೂರದೃಷ್ಟಿ ಜಾತಿಯಲ್ಲಿ ಇಲ್ಲ. ಬೀರನಹಳ್ಳಿ ಗ್ರಾಮದ ಮಠದ ನಾಗಯ್ಯನವರು ಮತ್ತು ಅವರ ಮಕ್ಕಳು ಇಷ್ಟಲಿಂಗ ಮಹಾಪೂಜೆ ಹಾಗೂ ಧರ್ಮ ಸಮಾರಂಭ ಏರ್ಪಡಿಸಿರುವುದು ಸಂತೋಷದ ಸಂಗತಿ ಎಂದರು.

ಸಮಾರಂಭದಲ್ಲಿ ಮಳಲಿಮಠದ ಡಾ. ನಾಗಭೂಷಣ ಶಿವಾಚಾರ್ಯರು ಹಾಗೂ ಚನ್ನಗಿರಿ ಹಿರೇಮಠದ ಡಾ. ಕೇದಾರ ಶಿವಶಾಂತವೀರ ಶಿವಾಚಾರ್ಯರು ಪಾಲ್ಗೊಂಡು ಧರ್ಮೋಪದೇಶವನ್ನು ಮಾಡಿದರು. ದಾವಣಗೆರೆ ದುಗ್ಗತ್ತಿ ಮಠದ ಪ್ರಶಾಂತ್ ನಿರೂಪಿಸಿದರು.

ಗಜೇಂದ್ರಗಡ ಸಮುದಾಯ ಆರೋಗ್ಯ ಕೇಂದ್ರ, ನರೇಗಾ ಕಾಮಗಾರಿ ಸ್ಥಳಕ್ಕೆ ಜಿ.ಪಂ ಸಿಇಓ ಭರತ್ ಭೇಟಿ

ರೋಗಿಗಳಿಗೆ ಸಮಸ್ಯೆಯಾಗದಂತೆ ಚಿಕಿತ್ಸೆ ಒದಗಿಸಿ

■ ವಿಜಯಸಾಕ್ಷಿ ಸುದ್ದಿ, ಗದಗ

ಗಜೇಂದ್ರಗಡ ತಾಲೂಕಿನ ಸಮುದಾಯ ಆರೋಗ್ಯ ಕೇಂದ್ರದಲ್ಲಿರುವ ಸಿಜರಿಯನ್ ಆಪರೇಷನ್ ಸೌಲಭ್ಯದ ಸದುಪಯೋಗವನ್ನು ಸಾರ್ವಜನಿಕರು ಪಡೆಯಲು ಮುಂದಾಗಬೇಕು ಎಂದು ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭರತ ಎಸ್ ಹೇಳಿದರು.

ಜಿಲ್ಲೆಯ ಗಜೇಂದ್ರಗಡ ಪಟ್ಟಣದ ಸಮುದಾಯ ಆರೋಗ್ಯ ಕೇಂದ್ರಕ್ಕೆ ಭೇಟಿ ನೀಡಿ ಪರಿಶೀಲಿಸಿ, ಅವರು ಮಾತನಾಡಿದರು.

ಆಸ್ಪತ್ರೆಗೆ ಚಿಕಿತ್ಸೆಗಾಗಿ ಆಗಮಿಸಿದ ರೋಗಿಗಳ ಕುಂದು-ಕೊರತೆಗಳನ್ನು ಸಂಯಮದಿಂದ ಆಲಿಸಿದ ಅವರು, ಆಸ್ಪತ್ರೆಯಲ್ಲಿ ಇರುವ ವೈದ್ಯರ ಸದುಪಯೋಗ ಪಡೆಯಿರಿ. ಆಸ್ಪತ್ರೆಗೆ ಅಗತ್ಯವಿರುವ ಎಲ್ಲ ಮೂಲಭೂತ ಸೌಕರ್ಯಗಳನ್ನು ಒದಗಿಸಲು ಸರ್ಕಾರ ಬದ್ಧವಾಗಿದೆ ಎಂದರು.

ರೋಗಿಗಳಿಗೆ ಯಾವುದೇ ರೀತಿಯ ಸಮಸ್ಯೆಯಾಗದಂತೆ ಕ್ರಮವಹಿಸಿ ಚಿಕಿತ್ಸೆ ಒದಗಿಸಬೇಕು. ದಿನಂಪ್ರತಿ ವೈದ್ಯರು ಆಸ್ಪತ್ರೆಯಲ್ಲಿ ಇದ್ದು ರೋಗಿಗಳಿಗೆ ಉತ್ತಮ ಚಿಕಿತ್ಸೆ ನೀಡಬೇಕು ಎಂದು ವೈದ್ಯಾಧಿಕಾರಿಗಳಿಗೆ ಸೂಚಿಸಿದರು.

ನರೇಗಾ ಕಾಮಗಾರಿ ವೀಕ್ಷಣೆ

ತಾಲೂಕಿನ ಚಿಲಝರಿ ಗ್ರಾಮದಲ್ಲಿ ನರೇಗಾ ಯೋಜನೆಯಡಿ ಸಾಮೂಹಿಕ ಬದು ನಿರ್ಮಾಣ ಕಾಮಗಾರಿ ವೀಕ್ಷಣೆ ಮಾಡಿ, ಕೂಲಿಕಾರರನ್ನು ಉದ್ದೇಶಿಸಿ ಮಾತನಾಡಿದ ಅವರು, ನರೇಗಾ ಯೋಜನೆಯಡಿಯಲ್ಲಿ ಬೇಡಿಕೆಯಾಧಾರಿತ ಕೂಲಿಕಾರರಿಗೆ ಕೆಲಸ ನೀಡಿ. ಅಳತೆಗೆ ತಕ್ಕಂತೆ ಕಟ್ಟೆ (ಪಡ) ಕಡಿಯಬೇಕು. ಅಳತೆಗೆ ತಕ್ಕಂತೆ ಕೂಲಿ ಪಾವತಿಸಬೇಕು ಎಂದರು.

ನಂತರ ಆಸ್ಪತ್ರೆಯಲ್ಲಿನ ದಾಸ್ತಾನು ಕೊಠಡಿ, ಹೆರಿಗೆ ಕೊಠಡಿ, ಒಳರೋಗಿಗಳ ಕೊಠಡಿ, ಔಷಧಿ ಕೊಠಡಿ ಸೇರಿ ಆಸ್ಪತ್ರೆಗಳ ದಾಖಲೆಗಳನ್ನು ಪರಿಶೀಲಿಸಿದರು. ಆಸ್ಪತ್ರೆಯ ಉದ್ಯಾನವನ ವೀಕ್ಷಣೆ ಮಾಡಿ, ಆಸ್ಪತ್ರೆಯ ಆವರಣದಲ್ಲಿ ನರೇಗಾ ಯೋಜನೆಯಡಿ ವಿವಿಧ ಸಸಿಗಳನ್ನು ನೆಡಸಲು ಅಧಿಕಾರಿಗಳಿಗೆ ಇದೇ ವೇಳೆ ಸೂಚಿಸಿದರು.

ನಂತರ ಅವರು ಸೂಡಿ ಗ್ರಾಮದ ಸಮುದಾಯ ಆರೋಗ್ಯ ಕೇಂದ್ರಕ್ಕೆ ಭೇಟಿ ನೀಡಿ ಆಸ್ಪತ್ರೆಯ ಮೂಲಸೌಕರ್ಯ ಕುರಿತು ಪರಿಶೀಲನೆ ನಡೆಸಿ, ಸಾರ್ವಜನಿಕ ಆಸ್ಪತ್ರೆಗೆ ಆಗಮಿಸುವ ಎಲ್ಲರಿಗೂ ಉತ್ತಮ ಚಿಕಿತ್ಸೆ ದೊರಕಿಸಲು ಆಸ್ಪತ್ರೆ ಅಧಿಕಾರಿಗಳು ಆದ್ಯತೆ ನೀಡುವಂತೆ ನಿರ್ದೇಶನ ನೀಡಿದರು.

ಶಾಂತಗೇರಿ ಗ್ರಾಮದ ಸಾಮೂಹಿಕ ಬದು ನಿರ್ಮಾಣ ಕಾಮಗಾರಿ ಸ್ಥಳಕ್ಕೆ ಭೇಟಿ ನೀಡಿ ಕೂಲಿಕಾರರ ಸಂಖ್ಯೆ, ಹಾಜರಾತಿ, ಎನ್.ಎಂ.ಆರ್ ಹಾಜರಾತಿ, ಕೂಲಿಕಾರರ ಗೈರು ಕುರಿತು ಪರಿಶೀಲಿಸಿದರು. ಈ ಸಂದರ್ಭದಲ್ಲಿ ಕಾರ್ಯನಿರ್ವಾಹಕ ಅಧಿಕಾರಿ ಬಸವರಾಜ ಬಡಿಗೇರ್, ಸಹಾಯಕ ಜಿಲ್ಲಾ ಸಮನ್ವಯ ಸಂಯೋಜಕ ಕಿರಣಕುಮಾರ, ಸಾಮಾಜಿಕ ಅರಣ್ಯ ಇಲಾಖೆಯ ಆರ್.ಎಫ್.ಓ ರಾಮಣ್ಣ ಪೂಜಾರ, ಸಿರಾಜ್, ಪಿಡಿಒಗಳು, ಆರ್.ಸಿ.ಎಚ್. ಅಧಿಕಾರಿಗಳು, ವೈದ್ಯರು, ನರೇಗಾ ಸಿಬ್ಬಂದಿಗಳು ಪಂಚಾಯತ ಸಿಬ್ಬಂದಿಗಳು ಇದ್ದರು.

ನರ್ಸರಿ ಭೇಟಿ

ಮುಶೀಗೇರಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ನೆಲ್ಲೂರು ನರ್ಸರಿಗೆ ಭೇಟಿ ನೀಡಿ ಸಸಿಗಳ ಬೆಳಸಿ, ನಿರ್ವಹಣೆ ಮಾಡುತ್ತಿರುವ ಕುರಿತು ಮಾಹಿತಿ ಪಡೆದುಕೊಂಡರು. ನರೇಗಾ ಯೋಜನೆಯಡಿ ರಸ್ತೆ ಬದಿ ನೆಡುತೋಪು 9000 ಸಸಿಗಳು, ಶಾಲಾ ಮತ್ತು ಸಂಘ ಸಂಸ್ಥೆಗಳ ವಿತರಣೆಗೆ 7500, ರೈತರಿಗೆ ವಿತರಿಸಲು 25000 ಸಸಿಗಳು ಸಿದ್ಧವಾಗಿವೆ ಎಂದು ಆರ್‌ಎಫ್‌ಒ ಮಾಹಿತಿ ನೀಡಿದರು. ಸರಿಯಾದ ರೀತಿಯಲ್ಲಿ ಸಸಿಗಳನ್ನು ವಿತರಿಸಲು ಮತ್ತು ಸೂಕ್ತ ಸಮಯದಲ್ಲಿ ಸಸಿಗಳನ್ನು ನೆಡಲು ಕ್ರಮ ಕೈಗೊಳ್ಳುವಂತೆ ಸಿಇಓ ಭರತ್ ಎಸ್ ಸೂಚಿಸಿದರು.

ಯಶಸ್ವಿಯಾಗಿ ಜರುಗಿದ 'ತೋಂಟದೋತ್ಸವ-2024'

■ ವಿಜಯಸಾಕ್ಷಿ ಸುದ್ದಿ, ಗದಗ

ನಗರದ ತೋಂಟದಾರ್ಯ ತಾಂತ್ರಿಕ ಮಹಾವಿದ್ಯಾಲಯದ ವಾರ್ಷಿಕ ಸ್ನೇಹಸಮ್ಮೇಳನ 'ತೋಂಟದೋತ್ಸವ-2024' ಅದ್ದೂರಿಯಾಗಿ ಜರುಗಿತು.

ಫಸ್ಟ್ ಜನರೇಷನ್ ಎಂಟರ್‌ಪ್ರೈಸಿಸ್‌ನ ಮ್ಯಾನೆಜಿಂಗ್ ಡೈರಕ್ಟರ್ ರಮೇಶ ಪಾಟೀಲ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿ, ವಿದ್ಯಾರ್ಥಿಗಳು ಇಂದಿನ ಸ್ಪರ್ಧಾತ್ಮಕ ದಿನಗಳಲ್ಲಿ ಹೇಗೆ ವಿದ್ಯಾರ್ಜನೆ ಮಾಡಬೇಕು, ಶಿಕ್ಷಣದ ನಂತರ ಉದ್ಯೋಗವಕಾಶಗಳನ್ನು ಹೇಗೆ ಸ್ವೀಕರಿಸಬೇಕು, ಮನೋಬಲವನ್ನು ಹೇಗೆ ಹೆಚ್ಚಿಸಿಕೊಳ್ಳಬೇಕು, ತಮ್ಮ ವ್ಯಕ್ತಿತ್ವದ ರಚನೆಯಲ್ಲಿ ಯಾವ ಯಾವ ವಿಷಯಗಳ ಕುರಿತು ಹೆಚ್ಚು ಆಸಕ್ತಿ ವಹಿಸಬೇಕು ಎಂಬುದನ್ನು ವಿವರಿಸಿದರು.

ಎಸ್‌ಟಿಎಸ್‌ಕೆಕೆ ಚೇರಮನ್ ಎಸ್.ಎಸ್. ಪಟ್ಟಣಶೆಟ್ಟಿ ಮಾತನಾಡಿ, ಮಹಾವಿದ್ಯಾಲಯವು ಡಾ. ತೋಂಟದ ಸಿದ್ಧಲಿಂಗ ಮಹಾಸ್ವಾಮಿಗಳ ಕನಸಾಗಿದ್ದು, ಇಂದು ಹಂತ ಹಂತಾವಾಗಿ

ಬೆಳೆಯುತ್ತ ಸಾಗುತ್ತಿದೆ. ಅವರ ಆಶಯದಂತೆ ಗ್ರಾಮೀಣ ವಿದ್ಯಾರ್ಥಿಗಳಿಗೆ ಗುಣಮಟ್ಟದ ತಾಂತ್ರಿಕ ಶಿಕ್ಷಣವನ್ನು ನೀಡುವಲ್ಲಿ ತನ್ನ ನಿರಂತರ ಪ್ರಯತ್ನವನ್ನು ಮಾಡುತ್ತಿದೆ. ನಮ್ಮ ಮಹಾವಿದ್ಯಾಲಯದಿಂದ ವಿದ್ಯಾರ್ಜನೆ ಮಾಡಿದ ವಿದ್ಯಾರ್ಥಿಗಳು ಜಗತ್ತಿನ ವಿವಿಧ ಕಡೆಗಳಲ್ಲಿ ಕೆಲಸ ಮಾಡುತ್ತಿದ್ದು, ಸಂಸ್ಥೆಯ ಕೀರ್ತಿಯನ್ನು ಬೆಳಗುತ್ತಿದ್ದಾರೆ. ವಿದ್ಯಾರ್ಥಿಗಳ ಬೆಳವಣಿಗೆಗೆ ಬೇಕಾದ ಎಲ್ಲ ಅನುಕೂಲತೆಗಳನ್ನು ಮಹಾವಿದ್ಯಾಲಯ ನೀಡಲು ಸಶಕ್ತವಾಗಿದ್ದು, ಅದರ ಲಾಭವನ್ನು ಪಡೆದುಕೊಳ್ಳಬೇಕು ಎಂದು ಕರೆ ನೀಡಿದರು.

ಪ್ರಾಂಶುಪಾಲ ಡಾ. ಎಂ.ಎಂ. ಅವಟಿ ಮಹಾವಿದ್ಯಾಲಯದ ಪ್ರಸಕ್ತ ವರ್ಷದ ವರದಿಯನ್ನು ಓದಿದರು. ವಿಟಿಯು ಮಟ್ಟದಲ್ಲೂ ಕೂಡ ವಿದ್ಯಾರ್ಥಿಗಳು ಒಳ್ಳೆಯ ಸಾಧನೆ ತೋರುತ್ತಿರುವುದು ಮಹಾವಿದ್ಯಾಲಯದ ಬೆಳವಣಿಗೆಗೆ ಧನಾತ್ಮಕತೆಯನ್ನು ತುಂಬುತ್ತದೆ ಎಂದು ನುಡಿದರು. ತೋಂಟದೋತ್ಸವ-2024ರ ಚೇರಮನ್ ಡಾ. ರಮೇಶ ಬಡಿಗೇರ, ಉಪ ಪ್ರಾಂಶುಪಾಲ ಡಾ. ಈರಣ್ಣ ಕೊರಚಗಾಂವ್, ವಿದ್ಯಾರ್ಥಿ ಪ್ರತಿನಿಧಿಗಳಾದ ಶಿವಮೂರ್ತಿ ರೇಷ್ಮೆ, ಭೂಮಿಕಾ, ನಂದೀಶ, ಪ್ರಾಂಜಲ್ ಉಪಸ್ಥಿತರಿದ್ದರು.

ಮಾನ್ಯ ಶೆಟ್ಟಿ, ಸೌಮ್ಯ ಬಾಕಳೆ, ದೀಪ್ತಿ ಗಾಣಿಗೇರ, ಶೃತಿ ಹವಳದ ಬಹುಮಾನ ವಿತರಣೆ ಕಾರ್ಯಕ್ರಮ ನಿರ್ವಹಿಸಿದರು. ಸೀಮಾ ಕುಲಕರ್ಣಿ, ಪ್ರಜ್ಞಾ ಪಾಟೀಲ ನಿರೂಪಿಸಿದರು. ಅದಿತಿ ವಂದಿಸಿದರು. ಸಾಯಂಕಾಲ ನಡೆದ ಸಾಂಸ್ಕೃತಿಕ ಕಾರ್ಯಕ್ರಮವನ್ನು ತರನ್ನುಮ್ ನಿರೂಪಿಸಿದರು.

ಮತ ಎಣಿಕೆ ಕೇಂದ್ರದ ಸುತ್ತ ಪ್ರತಿಬಂಧಕಾಜ್ಞೆ ಜಾರಿ

■ ವಿಜಯಸಾಕ್ಷಿ ಸುದ್ದಿ, ಧಾರವಾಡ

ಧಾರವಾಡ ಲೋಕಸಭಾ ಮತಕ್ಷೇತ್ರ ವ್ಯಾಪ್ತಿಯಲ್ಲಿ ಲೋಕಸಭಾ ಸಾರ್ವತ್ರಿಕ ಚುಣಾವಣೆ ಮೇ 7ರಂದು ಜರುಗಿದ್ದು, ಜೂ.4ರಂದು ಮತ ಎಣಿಕೆ ಜರುಗುವ ಹಿನ್ನೆಲೆಯಲ್ಲಿ ಧಾರವಾಡ ಕೃಷಿ ವಿಶ್ವವಿದ್ಯಾಲಯ ವ್ಯಾಪ್ತಿಯ 200 ಮೀಟರ್ ವ್ಯಾಪ್ತಿಯ ಸುತ್ತಮುತ್ತಲಿನ ಪ್ರದೇಶದಲ್ಲಿ ಪ್ರತಿಬಂಧಕಾಜ್ಞೆ ಜಾರಿಗೊಳಿಸಿ, ಜಿಲ್ಲಾಧಿಕಾರಿ ದಿವ್ಯ ಪ್ರಭು ಆದೇಶಿಸಿದ್ದಾರೆ.

ಜೂನ್ 4ರಂದು ಮತ ಎಣಿಕೆ ಇರುವುದರಿಂದ ಜಿಲ್ಲೆಯ ಕೃವಿವಿಯ ಮತ ಎಣಿಕೆ ಕೇಂದ್ರದ ವ್ಯಾಪ್ತಿಯ 200 ಮೀಟರ್ ಸುತ್ತಮುತ್ತಲಿನ ಪ್ರದೇಶದಲ್ಲಿ ಜೂನ್ 2ರ ಬೆಳಿಗ್ಗೆ 6 ಗಂಟೆಯಿಂದ ಜೂನ್ 5ರ ಸಂಜೆ 6 ಗಂಟೆಯವರೆಗೆ ಸಿ.ಆರ್.ಪಿ.ಸಿ 1973ರ ಕಲಂ 144 ಮತ್ತು ಕರ್ನಾಟಕ ಪೊಲೀಸ್ ಕಾಯ್ದೆ 1963ರ ಕಲಂ 35ರಡಿ ಪ್ರತಿಬಂಧಕಾಜ್ಞೆಯನ್ನು ಜಾರಿ ಮಾಡಿ ಆದೇಶಿಸಿದ್ದಾರೆ.

ಮತ ಎಣಿಕೆಯ ದಿನದಂದು ಯಾವುದೇ ಅಹಿತಕರ ಘಟನೆಗಳು ನಡೆಯದಂತೆ ಮುನ್ನೆಚ್ಚರಿಕೆಯಾಗಿ ಮತ್ತು ಮತದಾನದ ಪ್ರಾವಿತ್ರ್ಯತೆಯನ್ನು ಕಾಪಾಡುವ ಹಿತದೃಷ್ಟಿಯಿಂದ ಸಿ.ಆರ್.ಪಿ.ಸಿ 1973ರ ಕಲಂ 144 ಮತ್ತು ಕರ್ನಾಟಕ ಪೊಲೀಸ್ ಕಾಯ್ದೆ 1963ರ ಕಲಂ 35ರ ಮೇರೆಗೆ ಪ್ರತಿಬಂಧಕಾಜ್ಞೆ ವಿಧಿಸಿದ್ದು, ಆದೇಶವನ್ನು ಉಲ್ಲಂಘಿಸುವವರ ವಿರುದ್ಧ ಭಾರತೀಯ ದಂಡ ಸಂಹಿತೆ ಕಲಂ 188ರ ಪ್ರಕಾರ ಕ್ರಮವನ್ನು ಜರುಗಿಸಲು ಸಂಬಂಧಿಸಿದ ಇಲಾಖೆಯ ಅಧಿಕಾರಿಗಳಿಗೆ ಜಿಲ್ಲಾಧಿಕಾರಿ ದಿವ್ಯ ಪ್ರಭು ಆದೇಶದಲ್ಲಿ ತಿಳಿಸಿದ್ದಾರೆ.

ಮತ ಎಣಿಕೆ ಕೇಂದ್ರದ ಸಿದ್ಧತೆ ಕುರಿತು ರಾಜಕೀಯ ಪಕ್ಷಗಳ ಸಭೆ ಜರುಗಿಸಿದ ಡಿಸಿ ದಿವ್ಯ ಪ್ರಭು

ಚುನಾವಣಾ ಆಯೋಗದ ಮಾರ್ಗಸೂಚಿ ಪಾಲಿಸಿ

■ ವಿಜಯಸಾಕ್ಷಿ ಸುದ್ದಿ, ಧಾರವಾಡ

ಮೇ 7ರಂದು ಜರುಗಿರುವ ಧಾರವಾಡ-11 ಲೋಕಸಭಾ ಮತಕ್ಷೇತ್ರದ ಚುನಾವಣೆಯ ಮತಗಳ ಎಣಿಕೆ ಕಾರ್ಯ ಜೂನ್ 4ರಂದು ಜರುಗಲಿದ್ದು, ಮತ ಎಣಿಕೆ ಸಂದರ್ಭದಲ್ಲಿ ಅನುಸರಿಸಬೇಕಾದ ನಿಯಮಗಳನ್ನು ಭಾರತ ಚುನಾವಣಾ ಆಯೋಗ ನೀಡಿದೆ. ಪ್ರತಿ ರಾಜಕೀಯ ಪಕ್ಷಗಳ ಮತ್ತು ಪಕ್ಷೇತರ ಅಭ್ಯರ್ಥಿಗಳು ತಮ್ಮ ಚುನಾವಣಾ ಏಜೆಂಟ್, ಮತ ಎಣಿಕಾ ಏಜೆಂಟರು ಕಡ್ಡಾಯವಾಗಿ ಚುನಾವಣಾ ಆಯೋಗ ನೀಡಿರುವ ಮಾರ್ಗಸೂಚಿಗಳನ್ನು ಪಾಲಿಸುವಂತೆ ತಿಳಿಸಬೇಕೆಂದು ಚುನಾವಣಾ ಅಧಿಕಾರಿಗಳೂ ಆಗಿರುವ ಜಿಲ್ಲಾಧಿಕಾರಿ ದಿವ್ಯ ಪ್ರಭು ಹೇಳಿದರು.

ಅವರು ಗುರುವಾರ ಬೆಳಿಗ್ಗೆ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಲೋಕಸಭಾ ಸಾರ್ವತ್ರಿಕ ಚುನಾವಣೆ-2024ರ ಮತ ಎಣಿಕೆ ಪ್ರಕ್ರಿಯೆಗಳ ಕುರಿತು ಅಭ್ಯರ್ಥಿಗಳ ಮತ್ತು ರಾಜಕೀಯ ಪಕ್ಷಗಳ ಪ್ರತಿನಿಧಿಗಳ ಸಭೆ ಜರುಗಿಸಿ ಮಾತನಾಡಿದರು.

ಮತ ಎಣಿಕಾ ಕೇಂದ್ರದೊಳಗೆ ಮೊಬೈಲ್ ಸೇರಿದಂತೆ ಯಾವುದೇ ರೀತಿಯ ಎಲೆಕ್ಟ್ರಾನಿಕ್ ವಸ್ತು ತರಲು ಅವಕಾಶವಿಲ್ಲ. ಯಾವುದೇ ರೀತಿಯ ಆಯುಧ, ಗುಟಕಾ, ಬೀಡಿ ಸಿಗರೇಟ್, ಎಲೆ ಅಡಿಕೆ ತರುವುದನ್ನು ಸಹ ನಿರ್ಬಂಧಿಸಲಾಗಿದೆ. ಚುನಾವಣಾ ಆಯೋಗದ ಎಲ್ಲ ನಿಯಮಗಳನ್ನು ಪಾಲಿಸು